

# ಸಿಹಿ ಕಹಿ

SK NEWS ಕನ್ನಡ

ಸಂಪಾದಕರು : ಮಾರುತಿ ಬಸವಂತಪ್ಪ ಹೊಸಮನಿ

Editor : MARUTI BASAVANTAPPA HOSAMANI

Cell : +91 9741319119

ಕನ್ನಡ ದಿನಪತ್ರಿಕೆ, ಬಾಗಲಕೋಟೆ

ಬಾಗಲಕೋಟೆಯಿಂದ ಪ್ರಕಟಿತ

RNI REG No. : KARKAN/2016/75068

SIHI KAHI

KANNADA DAILY MORNING

BAGALKOT

Volume : 07 Issue : 235 Wednesday 28-05-2025 E-mail : maruti.b.hosamani76@gmail.com Page: 4 Price : Rs. 1/-


## ಹಲವಾರು ಬೇಡಿಕೆಗಳು ಈಡೇರಿಕೆಗೆ ಆಗ್ರಹಿಸಿ ಡಿಎಸ್ಎಸ್ ಮುಖಂಡರಿಂದ ಅಹೋರಾತ್ರಿ ಧರಣಿ ಸತ್ಯಾಗ್ರಹ





**ಕಲಕೇರಿ :** ಕರ್ನಾಟಕ ರಾಜ್ಯ ದಲಿತ ಸಂಘರ್ಷ ಸಮಿತಿ ಡಾ, ಡಿ.ಜಿ ಸಾಗರ ಬಣ ವಿಜಯಪುರ ಹಾಗೂ ಗ್ರಾಮ ಶಾಖೆ ಕಲಕೇರಿ. ಇವರ ವತಿಯಿಂದ ಕಲಕೇರಿ ಗ್ರಾಮದಲ್ಲಿ ಬೃಹತ ಪ್ರತಿಭಟನೆ ಮೆರವಣಿಗೆ ಮತ್ತು ಅಹೋರಾತ್ರಿ ಧರಣಿ ಸತ್ಯಾಗ್ರಹ ಸೋಮವಾರ ದಿಂದ ಅಂಬೇಡ್ಕರ್ ಸರ್ಕಲ್ ಯಿಂದ ಮೇನ್ ಬಜಾರ್ದವರೆಗೂ ಪ್ರತಿಭಟನೆ ನಡೆಯಿತು. ಈ ಸಂದರ್ಭದಲ್ಲಿ ವಾಯ್.ಸಿ. ಮಯೂರ ಜಿಲ್ಲಾ ಸಂಚಾಲಕರು ಡಿ.ಎಸ್.ಎಫ್ ವಿಜಯಪುರ ಇವರು ತಾಳಿಕೋಟಿ ತಾಲೂಕಿನ ಕಲಕೇರಿ ಗ್ರಾಮದಲ್ಲಿ ಶ್ರೀ ಮಡಿವಾಳೇಶ್ವರ ದೇವಸ್ಥಾನದ ಅವರಣದಲ್ಲಿ ಅಹೋರಾತ್ರಿ ಧರಣಿ ಸತ್ಯಾಗ್ರಹ ಸೋಮವಾರ ಪ್ರಾರಂಭ ಗೊಂಡಿದೆ ಅಧಿಕಾರಿಗಳಿಗೆ ತಿಳಿಸೋದೊ ಏನೇಂದರೆ ನಮ್ಮ ಕಲಕೇರಿ ಗ್ರಾಮ ಹಾಗೂ ಸುತ್ತಮುತ್ತ ಹಳ್ಳಿಯ ಗ್ರಾಮಗಳಿಗೆ ಹಲವಾರು ಬೇಡಿಕೆಗಳನ್ನು ಅಧಿಕಾರಿಗಳು ಈ ಕೂಡಲೇ ಈಡೇರಿಸಬೇಕು ನಮ್ಮ ಬೇಡಿಕೆಗಳನ್ನು ಈಡೇರಿಸಿದಿದ್ದರೆ ಮುಂದಿನ ದಿನ ಮಾನದಲ್ಲಿ ಕ್ರಾಂತಿಕಾರಿ ಹೋರಾಟ ಮಾಡುತ್ತೇವೆ ಎಂದು ತಿಳಿಸಿದರು. ಸಿದ್ದು ರಾಯಣ್ಣವರ ಜಿಲ್ಲಾಸಂಚಾಲಕರು ಡಿ.ಎಸ್. ಎಸ್ ವಿಜಯಪುರ ಈ ಸಂದರ್ಭದಲ್ಲಿ ನಮ್ಮ 16 ಬೇಡಿಕೆಗಳನ್ನು ಈಡೇರುವರೆಗೂ ಈ ಧರಣಿ ಸತ್ಯಾಗ್ರಹ ನಿಲ್ಲುವುದಿಲ್ಲ ಎಂದು ತಿಳಿಸಿದರು. ಹಾಗೂ ಅನೇಕ ಸಂಚಾಲಕರು ಈ ಹೋರಾಟದಲ್ಲಿ ಮಾತನಾಡಿದರು. ಸೋಮಶೇಖರ್ ಬಡಿಗೇರ್ ವಲಯ ಸಂಚಾಲಕರು ಡಿಎಸ್ಎಸ್ ವಲಯ ಕಲಕೇರಿ. ಪದಾಧಿಕಾರಿಗಳು ವಲಯ ಘಟಕ ಕಲಕೇರಿ ಯಮನೂರಿ ಸಿಂದಿಗಿರಿ. ತಿಪ್ಪಣ್ಣ ಮಾದರ್. ಪ್ರಕಾಶ್ ನಾಟಿಕರ್. ಸಂಜೀವ ಉತಾಳೆ. ಮರಲಿಂಗಪ್ಪ ಬಡಿಗೇರ್. ಪದಾಧಿಕಾರಿಗಳು ಗ್ರಾಮ ಘಟಕ ಕಲಕೇರಿ ಬಸವರಾಜ್‌ಗುಡಸುಲಮನಿಸಂಚಾಲಕರು. ಮಲ್ಲಪ್ಪ ನಡುವಿನಕೇರಿ ಸಂಚಾಲಕರು. ಪ್ರಕಾಶ್ ದೊಡಮನಿ ಸಂಚಾಲಕರು. ಆನಂದ್ ಹೊಸಮನಿ ಸಂಚಾಲಕರು. ಸೋಮು ಹೊಸಮನಿ ಸಂಚಾಲಕರು. ದೇವೇಂದ್ರ ವಡ್ಡರ್ ಸಂಚಾಲಕರು. ಅರ್ಜುನ್ ನಡುವಿನಮನಿ. ಜೈ ಭೀಮ್ ಉತಾಳೆ. ಶರಣು ಚಲವಾದಿ. ಇನ್ನೂ ಅನೇಕ ಪದಾಧಿಕಾರಿಗಳು ಗ್ರಾಮಸ್ಥರು ಈ ಹೋರಾಟದಲ್ಲಿ ಪಾಲ್ಗೊಂಡು ಹಾಗೂ ಅಹೋರಾತ್ರಿಯ ಧರಣಿ ಸತ್ಯಾಗ್ರಹದಲ್ಲಿ ಪಾಲ್ಗೊಂಡು ನಮ್ಮ ಹಲವಾರು ಬೇಡಿಕೆಗಳನ್ನು ಈಡೇರುವರೆಗೂ ಈ ಹೋರಾಟ ನಿಲ್ಲುವುದಿಲ್ಲ ಎಂದು ಎಲ್ಲಾ ಹೋರಾಟಗಾರರು ಈ ಸಂದರ್ಭದಲ್ಲಿ ತಿಳಿಸಿದರು.

**ತಾಲೂಕ ವರದಿಗಾರರು, ಸಿಹಿ ಕಹಿ ಕನ್ನಡ ದಿನ ಪತ್ರಿಕೆ ಹಾಗೂ ಎಸ್.ಕೆ ನ್ಯೂಸ್ ಕನ್ನಡ ಚಾನಲ್: ಮೈಬೂಬಬಾಷ.ಮನಗೂಳಿ. ತಾಳಿಕೋಟೆ**

## ತಾಲೂಕ ಟೀಚರ್ಸ್ ಕೋ ಆಪರೇಟಿವ್ ಬ್ಯಾಂಕಿನ ನೂತನ ಅಧ್ಯಕ್ಷರಾಗಿ & ಉಪಾಧ್ಯಕ್ಷರಾಗಿ ಆಯ್ಕೆ



**ಸಿಹಿ ಕಹಿ ಸುದ್ದಿ,**

**ರೋಣ :** ತಾಲೂಕ ಟೀಚರ್ಸ್ ಕೋ ಆಪರೇಟಿವ್ ಬ್ಯಾಂಕಿನ ನೂತನ ಅಧ್ಯಕ್ಷರಾಗಿ ಶ್ರೀ ಅಶೋಕ ಕುರಿಯವರು ಸ.ಉ.ಹಿ.ಪ್ರಾ.ಗಂ. ಮ.ಶಾಲೆ ರೋಣ ಹಾಗೂ ಉಪಾಧ್ಯಕ್ಷರಾಗಿ ಶ್ರೀ ರಮೇಶ ಬಿ ಇಟಗಿ ಸ.ಕಿ.ಪ್ರಾಶಾಲೆ ಯರೇಕುರಬನಾಳ ದಿನಾಂಕ 24-05-2025 ರಂದು ಅವಿರೋಧವಾಗಿ ಆಯ್ಕೆ ಯಾದರು. ರೋಣ ಪಟ್ಟಣದಲ್ಲಿ ರೋಣ ತಾಲೂಕ ಟೀಚರ್ಸ್ ಕೋ ಆಪರೇಟಿವ್ ಬ್ಯಾಂಕಿನ ಉನ್ನತ ಸ್ಥಾನಕ್ಕೆ ತರಲು ಶ್ರಮಿಸುವೆ ಎಂದು ನೂತನ ಅಧ್ಯಕ್ಷರಾದ ಅಶೋಕ ಕುರಿಯವರು ಮಾತನಾಡಿದರು.

ಈ ಕಾರ್ಯಕ್ರಮದಲ್ಲಿ ರೋಣ ತಾಲೂಕಿನ ಶಿಕ್ಷಕರ ಸಂಘದ ಅಧ್ಯಕ್ಷರಾದ ಶ್ರೀ ವಾಯ್ ಡಿ ಗಾಣಿಗೇರ, ಗದಗ ಜಿಲ್ಲಾ ಶಿಕ್ಷಕರ ಸಂಘದ ಪ್ರಧಾನ ಕಾರ್ಯದರ್ಶಿ ಶ್ರೀ ಮಹೇಶ ಕುರಿಯವರ, ಉಪಾಧ್ಯಕ್ಷರಾದ ಶ್ರೀ ಎಂ ವಾಯ ಜಕ್ಕರಸಾನಿ, ರೋಣ ತಾಲೂಕ ನೌಕರರ ಸಂಘದ ಅಧ್ಯಕ್ಷರಾದ ಶ್ರೀ ಶರಣು ದಾನಪ್ಪಗೌಡರ ಹಾಗೂ ಬ್ಯಾಂಕಿನ ಎಲ್ಲಾ ನಿರ್ದೇಶಕರು, ಚುನಾವಣಾ ಅಧಿಕಾರಿಗಳು ಹಾಗೂ ಸಿಬ್ಬಂದಿ ವರ್ಗ ಬ್ಯಾಂಕಿನ ಎಲ್ಲಾ ನಿರ್ದೇಶಕರು ವಿವಿಧ ಶಾಲೆಗಳಿಂದ ಆಗಮಿಸಿದ ಎಲ್ಲೂ ಗುರು ವೃಂದ ಹಾಗೂ ಬ್ಯಾಂಕಿನ್ ಸಿಬ್ಬಂದಿ ಭಾಗವಹಿಸಿ ಸರ್ಕಾರಿ ಉರ್ದು ಹಿರಿಯ ಪ್ರಾಥಮಿಕ ಗಂಡು ಮಕ್ಕಳ ಶಾಲೆ ಪ್ರಧಾನ ಗುರುಗಳಾದ ಶ್ರೀ ಎನ್ ಎ ಮುಲ್ಲಾ, ಎ ಎಂ ಮಾರನಬಸರಿ ಹಾಗೂ ಸಿಬ್ಬಂದಿ ವರ್ಗ ಸೇರಿ ನೂತನವಾಗಿ ಆಯ್ಕೆಯಾದ ಅಧ್ಯಕ್ಷರಿಗೂ ಹಾಗೂ ಉಪಾಧ್ಯಕ್ಷರಿಗೂ ಗೌರವ ಪೂರಕ ಸನ್ಮಾನ ಮಾಡಿದರು.

**ಜಿಲ್ಲಾ ವರದಿಗಾರರು, ಸಿಹಿ ಕಹಿ ಕನ್ನಡ ದಿನ ಪತ್ರಿಕೆ ಹಾಗೂ ಎಸ್.ಕೆ ನ್ಯೂಸ್ ಕನ್ನಡ ಚಾನಲ್:ಎಸ್.ವಿ ಸಂಕನಗೌಡ್ರ.ರೋಣ.ಗದಗ**

## ಕೂಡಗಿ ಎನ್ ಟಿ ಪಿ ಸಿ ಯಲ್ಲಿ ಸ್ವಚ್ಛತಾ ಪಖ್ವಾಡ-2025 ಕಾರ್ಯಕ್ರಮ ಆಚರಣೆ

**ಕೊಲ್ಹಾರ :** ಸ್ವಚ್ಛತೆ ಕೇವಲ ಒಂದು ಕಾರ್ಯ ಮಾತ್ರವಲ್ಲದೆ ಅದು ಜೀವನದ ಒಂದು ವಿಧಾನವಾಗಿದೆ. ಸ್ವಚ್ಛತಾ ಪಖ್ವಾಡದ ಮೂಲಕ ನಾವು ನಮ್ಮ ಬೆಂಬಲವನ್ನು ಸ್ವಚ್ಛ ಭಾರತ್ ಮಿ ಷನ್ ಮತ್ತು ಪ್ರಧಾನ ಮಂತ್ರಿ ನರೇಂದ್ರ ಮೋದಿಯವರ ಹಸಿರು ಭಾರತದ ದೃಷ್ಟಿಗೆ ಪುನರುಚ್ಚರಿಸುತ್ತಿದ್ದೇವೆ ಎಂದು ಎನ್‌ಟಿಪಿಸಿ ಕೂಡಗಿಯ ಕಾರ್ಯನಿರ್ವಾಹಕ ನಿರ್ದೇಶಕ ಬಿದ್ಯಾನಂದ ಝಾ ಹೇಳಿದರು.




ತಾಲ್ಲೂಕಿನ ಕೂಡಗಿ ಎನ್ ಟಿ ಪಿ ಸಿ ಯಲ್ಲಿ 2025 ನೇ ಸಾಲಿನ ಸ್ವಚ್ಛತಾ ಪಖ್ವಾಡಾ ಅಂಗವಾಗಿ ಹಮ್ಮಿಕೊಂಡ ಎನ್‌ಟಿಪಿಸಿ ಕೂಡಗಿ ಮುಖ್ಯ ಗೇಟ್ ಪ್ಲಾಂಟ್ ಪ್ರದೇಶ ಮತ್ತು ಬಸವನ ಬಾಗೇವಾಡಿ ರೈಲ್ವೆ ನಿಲ್ದಾಣ (ತೆಲಗಿ) ವನ್ನು ಸ್ವಚ್ಛಗೊಳಿಸಿ ಮಾತನಾಡಿದ ಅವರು, ಸ್ವಚ್ಛ ಭಾರತ್ ಮಿಷನ್ ಮತ್ತು ಸುಸ್ಥಿರ ಅಭಿವೃದ್ಧಿಗೆ ತನ್ನ ಅಚಲ ಬದ್ಧತೆಯ ಭಾಗವಾಗಿ ಎನ್‌ಟಿಪಿಸಿಯು ಸ್ವಚ್ಛತಾ ಪಖ್ವಾಡ 2025ನ್ನು ಮೇ 16 ರಿಂದ 31 ರವರೆಗೆ ಸಕ್ರಿಯವಾಗಿ ಆಚರಿಸಲಾಗುತ್ತಿದೆ. ಆದರೆ ಇಂದು ಭಾರತದಾದ್ಯಂತದ ನಾಗರೀಕರು ಮತ್ತು ಸಂಸ್ಥೆಗಳಲ್ಲಿ ಪರಿಸರದ ಜವಾಬ್ದಾರಿ ಬಹಳಷ್ಟಿದೆ ಎಂದರು.

ಇಂದು ನಾವು ಎರಡು ಪ್ರಮುಖ ಸ್ಥಳಗಳಲ್ಲಿ ದೊಡ್ಡ ಪ್ರಮಾಣದಲ್ಲಿ ಸ್ವಚ್ಛಗೊಳಿಸುವುದು ಸೇರಿದಂತೆ ಸಮುದಾಯ ಚಾಲಿತ ಉಪಕ್ರಮಗಳ ಸರಣಿಯನ್ನು ಆಯೋಜಿಸಿದ್ದೇವೆ. ಬಸವನಬಾಗೇವಾಡಿ ರಸ್ತೆಯಲ್ಲಿನ ಎನ್ ಟಿ ಪಿ ಸಿ ಮುಖ್ಯ ಗೇಟ್ ಪ್ಲಾಂಟ್ ಪ್ರದೇಶ ಮತ್ತು ಬಸವನ ಬಾಗೇವಾಡಿ ರಸ್ತೆ ರೈಲ್ವೆ ನಿಲ್ದಾಣದಲ್ಲಿ (ತೆಲಗಿ) ಶ್ರಮಧಾನ ಚಟುವಟಿಕೆ ಹಾಗೂ ಸ್ಥಾವರದ ಕ್ಯಾಂಪಸ್ ನ್ನು ಎನ್‌ಟಿಪಿಸಿ ಉದ್ಯೋಗಿಗಳು ಸ್ವಚ್ಛಗೊಳಿಸಿ ಸ್ವಚ್ಛತೆ ಪಖ್ವಾಡಾ ಕಾರ್ಯಕ್ರಮವನ್ನು ಯಶಸ್ವಿಗೊಳಿಸಿದರು

ನಂತರ ಎನ್ ಟಿ ಪಿ ಸಿ ಅಧಿಕಾರಿಗಳು ಹಾಗೂ ನೌಕರರು ಬಸವನ ಬಾಗೇವಾಡಿ ರಸ್ತೆ ರೈಲ್ವೆ ನಿಲ್ದಾಣದ ಆವರಣವನ್ನು ಸ್ವಚ್ಛಗೊಳಿಸಿ, ತ್ಯಾಜ್ಯವನ್ನು ತೆಗೆದು ಹಾಕಿದರು ಮತ್ತು ದೈನಂದಿನ ಪ್ರಯಾಣಿಕರಿಗೆ ಪ್ರಯಾಣದ ಅನುಭವವನ್ನು ಹೆಚ್ಚಿಸಲು ಸುತ್ತಮುತ್ತಲಿನ ಪ್ರದೇಶಗಳನ್ನು ಸುಂದರಗೊಳಿಸಿದರು.ಸ್ಥಳದಲ್ಲಿ ಶಾಶ್ವತವಾದ ಸ್ವಚ್ಛತೆಯನ್ನು ಖಚಿತಪಡಿಸಿಕೊಳ್ಳಲು ಎನ್‌ಟಿಪಿಸಿಯವರು ಅವರು ಸ್ಟೇಷನ್ ಅಧಿಕಾರಿಗಳು ಮತ್ತು ಸ್ಥಳೀಯರಿಗೆ ಕಸದ ತೊಟ್ಟಿಗಳನ್ನು ಮತ್ತು ಇತರ ಅಗತ್ಯ ಶುಚಿಗೊಳಿಸುವ ವಸ್ತುಗಳನ್ನು ನೀಡಿ ನೈರ್ಮಲ್ಯ ಪ್ರಯತ್ನಗಳಲ್ಲಿ ಸಾರ್ವಜನಿಕ ಭಾಗವಹಿಸುವಿಕೆಯನ್ನು ಉತ್ತೇಜಿಸಿದರು.

ಸ್ವಚ್ಛತಾ ಪಖ್ವಾಡಾ ಆಚರಣೆಯು 17 ಮೇ 2025 ರಂದು ಎನ್‌ಟಿಪಿಸಿ ಕೂಡಗಿಯ ಸೇವಾ ಕಟ್ಟಡದಲ್ಲಿ ಸ್ವಚ್ಛತಾ ಪ್ರತಿಜ್ಞೆ ಸಮಾರಂಭದೊಂದಿಗೆ ಪ್ರಾರಂಭವಾಯಿತು. ಈ ಸಂದರ್ಭದಲ್ಲಿ, ಅಧಿಕಾರಿಗಳು ಮತ್ತು ಉದ್ಯೋಗಿಗಳು ತಮ್ಮ ವೃತ್ತಿಪರ ಮತ್ತು ವೈಯಕ್ತಿಕ ಜೀವನದಲ್ಲಿ ಸ್ವಚ್ಛತೆಯನ್ನು ಕಾಪಾಡಿಕೊಳ್ಳುವ ಬದ್ಧತೆಯನ್ನು ಪ್ರತಿಜ್ಞೆ ಮಾಡಿದರು. ಇದು ಹದಿನೈದು ದಿನಗಳ ಕಾಲದ ಅಭಿಯಾನಕ್ಕೆ ಸಾಂಕೇತಿಕ ಮತ್ತು ಸ್ಫೂರ್ತಿದಾಯಕ ಆರಂಭವನ್ನು ಸೂಚಿಸುತ್ತದೆ. ಈ ಚಟುವಟಿಕೆಗಳು ಎನ್‌ಟಿಪಿಸಿ ಕೂಡಗಿಯು ಪರಿಸರ ಉಸ್ತುವಾರಿ ಮತ್ತು ರಾಷ್ಟ್ರೀಯ ಗುರಿಗಳೊಂದಿಗೆ ಜೋಡಣೆಯ ವಿಶಾಲ ಕಾರ್ಯಾಚರಣೆಯ ಭಾಗವಾಗಿದೆ.

ಎನ್‌ಟಿಪಿಸಿ ಕುಡ್ಗಿ ಎಲ್ಲಾ ಉದ್ಯೋಗಿಗಳು, ನಿವಾಸಿಗಳು ಮತ್ತು ಪಾಲುದಾರರನ್ನು ಸ್ವಾಚ್ಛಾ ಪಖವಾಡ 2025 ರಲ್ಲಿ ತಮ್ಮ ಸಕ್ರಿಯ ಭಾಗವಹಿಸುವಿಕೆಯನ್ನು ಮುಂದುವರಿಸಲು ಪ್ರೋತ್ಸಾಹಿಸುತ್ತಾರೆ ಮತ್ತು ಮುಂದಿನ ತಲೆಮಾರುಗಳವರೆಗೆ ಆರೋಗ್ಯಕರ, ಹೆಚ್ಚು ಸುಸ್ಥಿರ ಭಾರತವನ್ನು ನಿರ್ಮಿಸಲು ಸಹಾಯ ಮಾಡುತ್ತಾರೆ.

ಈ ವೇಳೆ ಎನ್ ಟಿ ಪಿ ಸಿ ಕಾರ್ಯನಿರ್ವಾಹಕ ನಿರ್ದೇಶಕ ಬಿದ್ಯಾನಂದ ಝಾ, ಕಾರ್ಯಾಚರಣೆಗಳು ಮತ್ತು ನಿರ್ವಹಣೆಯ ಜನರಲ್ ಮ್ಯಾನೇಜರ್ ಸಂತೋಷ್ ತಿವಾರಿ, ಜನರಲ್ ಮ್ಯಾನೇಜರ್ (ಯೋಜನೆಗಳು) ಅಲೋಕೇಶ್ ಬ್ಯಾನರ್ಜಿ, ಜನರಲ್ ಮ್ಯಾನೇಜರ್ (ಒಪ್ಪಂದಗಳು ಮತ್ತು ವಸ್ತುಗಳು) ಉಮೇಶ್ ಕುಮಾರ್ ಜೈನ್ ,ಮಾನವ ಸಂಪನ್ಮೂಲ ಮುಖ್ಯಸ್ಥ ಕಾಲಿಯಾ ಮೂರ್ತಿ,ಸಾರ್ವಜನಿಕ ಸಂಪರ್ಕ ಅಧಿಕಾರಿ ಪೂಜಾ ಪಾಂಡೆ ಉಪಸ್ಥಿತರಿದ್ದರು.

## ಸಸ್ಯಾಹಾರದ ಜನ ಜಾಗೃತಿ ಜಾಥಾದ ಆಯೋಜನೆ ಶ್ಲಾಘನೀಯ: ಮಾತಾಜೀ ತ್ಯಾಗಮಯೀ ಮೆಚ್ಚುಗೆ





**ಸಿಹಿ ಕಹಿ ಸುದ್ದಿ,**

**ಚಳ್ಳಕೆರೆ :** ಸಸ್ಯಾಹಾರದ ಜನ ಜಾಗೃತಿ ಜಾಥಾದ ಆಯೋಜನೆ ಶ್ಲಾಘನೀಯವಾದದ್ದು ಎಂದು ಚಳ್ಳಕೆರೆಯ ಶ್ರೀಶಾರದಾಶ್ರಮದ ಅಧ್ಯಕ್ಷರಾದ ಮಾತಾಜೀ ತ್ಯಾಗಮಯೀ ಸಂತಸ ವ್ಯಕ್ತಪಡಿಸಿದರು. ವಿಶ್ವಾಮಿತ್ರ ಲೈಟ್ ಫೌಂಡೇಶನ್ ಅವರ ಸಹಯೋಗದಲ್ಲಿ ನಗರದ ಹಳೇ ನಗರದ ಪತ್ರೀಜಿ ಧ್ಯಾನಾಮೃತ ಕೇಂದ್ರ ಹಾಗೂ ತ್ಯಾಗರಾಜ ನಗರದ ಶ್ರೀವೀರಭದ್ರೇಶ್ವರ ಪಿರಮಿಡ್ ಕೇಂದ್ರದ ವತಿಯಿಂದ ಆಯೋಜಿಸಿದ್ದ "ಬೃಹತ್ ಸಸ್ಯಾಹಾರದ ಜನ ಜಾಗೃತಿ ಜಾಥಾ"ದ ಸಭಾ ಕಾರ್ಯಕ್ರಮದ ದಿವ್ಯ ಸಾನಿಧ್ಯ ವಹಿಸಿ ಅವರು ಆಶೀರ್ವಚನ ನೀಡಿ-ದರು. ನಾವು ತೆಗೆದು ಕೊಳ್ಳುವ ಆಹಾರ ನಮ್ಮ ದೇಹ ಮತ್ತು ಮನಸ್ಸಿನ ಮೇಲೆ ಗಾಢ ಪ್ರಭಾವ ಬೀರುತ್ತದೆ. ಸಾತ್ತ್ವಿಕ ಆಹಾರದ ಸೇವನೆಯಿಂದ ಮನಸ್ಸಿನ ಶುದ್ಧಿಯಾಗುತ್ತದೆ. ಆದ್ದರಿಂದ ಆಧ್ಯಾತ್ಮಿಕ ಸಾಧಕರಿಗೆ ಸಸ್ಯಾಹಾರವೇ ಸರ್ವ ಶ್ರೇಷ್ಠವಾದದ್ದು ಎಂದು ಸಸ್ಯಾಹಾರ ಸೇವನೆಯ ಮಹತ್ವದ ಬಗ್ಗೆ ಉಪನ್ಯಾಸ ನೀಡಿದರು. ಈ ಜನ ಜಾಗೃತಿ ಜಾಥಾವು ಹಳೇ ನಗರದ ಪತ್ರೀಜಿ ಧ್ಯಾನಾಮೃತ ಕೇಂದ್ರ ದಿಂದ ಪ್ರಾರಂಭವಾಗಿ ನೆಹರು ವೃತ್ತ, ರಹೀಂ ನಗರ, ಶಾಂತಿ ನಗರದ ಮೂಲಕ ತ್ಯಾಗರಾಜ ನಗರದ ಶ್ರೀವೀರಭದ್ರೇಶ್ವರ ಪಿರಮಿಡ್ ಧ್ಯಾನ ಕೇಂದ್ರವನ್ನು ತಲುಪಿತು. ಈ ಕಾರ್ಯಕ್ರಮದಲ್ಲಿ ನಗರ ಸಭೆಯ ಸದಸ್ಯರಾದ ಶ್ರೀಮತಿ ಸಾವಿತ್ರಮ್ಮ, ಧ್ಯಾನ ಬಂಧುಗಳಾದ ನಾಗೇಂದ್ರ, ಸುಧಾಕರ್, ಹೂವಿನ ಲಕ್ಷ್ಮೀದೇವಮ್ಮ, ಸೌಮ್ಯ, ಮಹಾದೇವಿ, ಗೀತಾ ಪ್ರಕಾಶ್, ಯತೀಶ್.ಎಂ ಸಿದ್ದಾಪುರ, ಸಿದ್ದೇಶ್, ಶಿವಣ್ಣ, ಶುಭ ಸೋಮಶೇಖರ್, ಮೈಯಂಕ್, ಶಿವಕುಮಾರ್, ಸುರೇಶ್, ವಿಜಯಕುಮಾರ್, ಮಂಜುಳ, ಲಕ್ಷ್ಮೀ ಸೇರಿದಂತೆ ಧ್ಯಾನ ಬಂಧುಗಳು ಪಾಲ್ಗೊಂಡಿದ್ದರು.

**ವರದಿ: ಯತೀಶ್.ಎಂ ಸಿದ್ದಾಪುರ,ಚಳ್ಳಕೆರೆ**

## ಕಾಂಗ್ರೆಸ್ಸಿಗರು ಛಲವಾದಿ ನಾರಾಯಣ ಸ್ವಾಮಿ ಮೇಲೆ ಗುಂಡಾವರ್ತನೆ ತೋರಿದ್ದು ಸರಿಯಲ್ಲ ಎಂದ ಮಲ್ಲು ಮಾದರ

**ಸಿಹಿ ಕಹಿ ಸುದ್ದಿ,**

**ಗದಗ :** ಇತ್ತೀಚಿಗೆ ಕಲಬುರ್ಗಿಯ ಪ್ರವಾಸಿ ಮಂದಿರದಲ್ಲಿ ವಿಧಾನ ಪರಿಷತ್ ಪ್ರತಿ ಪಕ್ಷದ ನಾಯಕ ಛಲವಾದಿ ನಾರಾಯಣ ಸ್ವಾಮಿ ಅವರಿಗೆ ಸಚಿವ ಪ್ರಿಯಾಂಕ ಖರ್ಗೆ ಬೆಂಬಲಿಗರು ಧಮ್ಕಿ ಹಾಕಿದ್ದಕ್ಕೆ ಬಿಜೆಪಿ ಎಸ್/ಸಿ ಮೋರ್ಚಾ ಗದಗ ಜಿಲ್ಲಾ ಪ್ರಧಾನ ಕಾರ್ಯದರ್ಶಿಗಳಾದ ಮಲ್ಲು ಮಾದರ ಆಕ್ರೋಶ ವ್ಯಕ್ತಪಡಿಸಿದ್ದಾರೆ. ಅವಾಚ್ಯ ಶಬ್ದಗಳಿಂದ ನಿಂದಿಸಿ ಕಾರಿನ ಮೇಲೆ ಮೊಟ್ಟೆ ಎಸೆದು ಶಾಹಿ ಚಲ್ಲಿ ವಿಕೃತಿ ಮೆರೆದಿದ್ದು ಇದು ಪ್ರಜಾತಂತ್ರ ವ್ಯವಸ್ಥೆ ಮೇಲೆ ಮಾಡಿದ ಅಪಚಾರ ಸರ್ಕಾರ ನಮ್ಮದೇ ಇದೆ ಎಂದು ಈ ರೀತಿ ಗುಂಡಾವರ್ತನೆ ತೋರಿದ್ದು ಸರಿಯಲ್ಲ ಅಧಿಕಾರ ಶಾಶ್ವತ ಅಲ್ಲ ಎನ್ನುವುದು ಅರಿತು ಕೊಳ್ಳಲಿ ಎಂದು ಕಿಡಿ ಕಾರಿದ್ದಾರೆ.



## ಪ್ರವೇಶಾತಿ ದಾಖಲಾತಿ ಹೆಚ್ಚಿಸಲು ಕ್ರಮ ವಹಿಸಿ: ಸೋಮಲಿಂಗ ಗೆಣ್ಣೂರ

**ವಿಜಯಪುರ :** ಅಲ್ಪಸಂಖ್ಯಾತ ವಿವಿಧ ವೃತ್ತಿಪರ ಕೋರ್ಸ್‌ಗಳ ಕಲಿಕೆ ಸೇರಿದಂತೆ ಅಲ್ಪಸಂಖ್ಯಾತ ವಿದ್ಯಾರ್ಥಿಗಳ ಪ್ರವೇಶ ದಾಖಲಾತಿ ಪ್ರಮಾಣ ಹೆಚ್ಚಿಸಲು ಪ್ರಧಾನಮಂತ್ರಿಗಳ 15 ಅಂಶಗಳ ಕುರಿತು ಜಾಗೃತಿ ಮೂಡಿಸುವಂತೆ ಸಂಬಂಧಿಸಿದ ಅಧಿಕಾರಿಗಳಿಗೆ ಅಪರ ಜಿಲ್ಲಾಧಿಕಾರಿ ಸೋಮಲಿಂಗ ಗೆಣ್ಣೂರ ಸೂಚನೆ ನೀಡಿದರು.

ಮಂಗಳವಾರ ಜಿಲ್ಲಾಧಿಕಾರಿಗಳ ಸಭಾಂಗಣದಲ್ಲಿ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ವತಿಯಿಂದ ಪ್ರಧಾನ ಮಂತ್ರಿಗಳ ಹೊಸ 15 ಅಂಶಗಳ ಕಾರ್ಯಕ್ರಮ ಅನುಷ್ಠಾನಗೊಳಿಸುವ ಕುರಿತು ಪರಿಶೀಲನಾ ಸಮಿತಿಯ 4ನೇ ತ್ರೈಮಾಸಿಕ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಐ.ಟಿ.ಐ ಕಾಲೇಜಿನ ಕೆಲವು ವಿದ್ಯಾರ್ಥಿಗಳು ತಮ್ಮ ಕಲಿಕೆಯನ್ನು ಅರ್ಧಕ್ಕೆ ನಿಲ್ಲಿಸುತ್ತಿರುವುದು ಕಂಡು ಬಂದಿದೆ. ಇಂತಹ ವಿದ್ಯಾರ್ಥಿಗಳ ಮನವೊಲಿಸಿ ಕಲಿಕೆ ಮುಂದುವರೆಸುಲು ಸೂಕ್ತ ಅರಿವು ಮೂಡಿಸಿ ಕಾಲೇಜು ದಾಖಲಾತಿ ಕಡಿಮೆಯಾಗದಂತೆ ಕ್ರಮ ವಹಿಸುವಂತೆ ಅವರು ಅಧಿಕಾರಿಗಳಿಗೆ ಸೂಚನೆ ನೀಡಿದರು.

ಅಲ್ಪ ಸಂಖ್ಯಾತರ ಕಲ್ಯಾಣ ಇಲಾಖೆಯ ವತಿಯಿಂದ ಪ್ರಧಾನ ಮಂತ್ರಿಗಳ ಹೊಸ ಹದಿನೈದು ಅಂಶಗಳ ಕಾರ್ಯಕ್ರಮದಡಿ ಮೆಟ್ರಿಕ್ ಪೂರ್ವ ಒಟ್ಟು 21438 ವಿದ್ಯಾರ್ಥಿಗಳ ಖಾತೆಗೆ ರೂ.3,04,23000, ಮೆಟ್ರಿಕ್ ನಂತರದ



3305ವಿದ್ಯಾರ್ಥಿಗಳಿಗೆ 5,13,06,228 ಹಾಗೂ ಡಿ.ಎಡ್ ಮತ್ತು ಬಿ.ಎಡ್ ವಿದ್ಯಾರ್ಥಿಗಳಿಗೆ ಪ್ರತಿ ವಿದ್ಯಾರ್ಥಿಗೆ 25 ಸಾವಿರ ಪ್ರೋತ್ಸಾಹಧನ ರೂಪದಲ್ಲಿ 112 ವಿದ್ಯಾರ್ಥಿಗಳಿಗೆ ರೂ.28,0000 ವೇತನವನ್ನು ಡಿ.ಬಿ.ಟಿ ಮೂಲಕ ವಿತರಿಸಲಾಗಿದೆ ಎಂದು ಅವರು ಹೇಳಿದರು.

ಪ್ರಧಾನ ಮಂತ್ರಿಗಳ ಹೊಸ 15 ಅಂಶಗಳ ಕಾರ್ಯಕ್ರಮ ಅನುಷ್ಠಾನಗೊಳಿಸುವ ಕುರಿತು ಪರಿಶೀಲನಾ ಸಮಿತಿಯ ಸಭೆಯ ಸದಸ್ಯ ಅಲ್ಲಾಬಕ್ಷ ಬಿಜಾಪುರ ಮಾತನಾಡಿ, ಜಿಲ್ಲೆಯಲ್ಲಿ ಐಟಿಐ ಕಾಲೇಜುಗಳಿಂದ ಪ್ರತಿ ವರ್ಷ ಹಲವಾರು ವಿದ್ಯಾರ್ಥಿಗಳು ತೇರ್ಗಡೆ ಹೊಂದಿ, ಉದ್ಯೋಗಕ್ಕಾಗಿ ಬೇರೆಡೆ ಹೋಗದಂತೆ ಜಿಲ್ಲೆಯ ಕೂಡಗಿಯ ಬೃಹತ್ ಎನ್.ಟಿ.ಪಿ.ಸಿ ಉದ್ದಿಮೆಯಲ್ಲಿ ವಿದ್ಯಾರ್ಥಿಗಳಿಗೆ ಪ್ರಥಮ ಆದ್ಯತೆ ನೀಡಿ ಉದ್ಯೋಗ ದೊರಕಿಸಲು ಕ್ರಮ ವಹಿಸಬೇಕು. ನಗರದ ಬಸ್ ನಿಲ್ದಾಣ ಹತ್ತಿರ ಚರಂಡಿ ಕಾಮಗಾರಿಯನ್ನು ತ್ವರಿತಗತಿಯಲ್ಲಿ ಪೂರ್ಣಗೊಳಿಸಬೇಕು, ಬರುವ ಶೈಕ್ಷಣಿಕ ತಿಂಗಳಲ್ಲಿ ಮೌಲಾನಾ ಅಬ್ದುಲ್ ಕಲಾಂ ವಸತಿ ಶಾಲೆ ಕಟ್ಟಡ ಪೂರ್ಣಗೊಳಿಸಿ ವಿದ್ಯಾರ್ಥಿಗಳಿಗೆ ಅನುಕೂಲ ಮಾಡಿಕೊಡುವಂತೆ ಅವರು ಸಭೆಗೆ ತಿಳಿಸಿದರು.

ಇನ್ನೋರ್ವ ಸದಸ್ಯ ಜಂಬುಕುಮಾರ ಬಾಗೇವಾಡಿ ಮಾತನಾಡಿ, ಜಿಲ್ಲೆಯಲ್ಲಿರುವ ಜೈನ್ ಬಸದಿಗಳ ಮಾಹಿತಿ ಹಾಗೂ ಅಲ್ಲಿಯ ಕರ್ತವ್ಯ ನಿರ್ವಹಿಸುತ್ತಿರುವ ಅರ್ಚಕರ ಮಾಹಿತಿ ಈಗಾಗಲೇ ಒದಗಿಸಲಾಗಿದೆ ಎಂದು ತಿಳಿಸಿದರು.

ಸಭೆಯಲ್ಲಿ ಜಿಲ್ಲಾ ಪಂಚಾಯತಿ ಮುಖ್ಯ ಯೋಜನಾಧಿಕಾರಿ ನಿಂಗಪ್ಪ ಗೋಠೆ, ಅಲ್ಪ ಸಂಖ್ಯಾತರ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿ ಪ್ರಶಾಂತ ಪೂಜಾರಿ, ಜಿಲ್ಲಾ ಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು.

# ಗ್ಯಾರಂಟಿ ಯೋಜನೆ ಅನುಷ್ಠಾನದಲ್ಲಿನ ತಾಂತ್ರಿಕ ಸಮಸ್ಯೆಗಳನ್ನು ಪರಿಹರಿಸಿ ಫಲಾನುಭವಿಗಳಿಗೆ ಸೌಲಭ್ಯ ಕಲ್ಪಿಸಿ: ಬಾಲಚಂದ್ರನ್ ಎಸ್.



**ಕೊಪ್ಪಳ :** ರಾಜ್ಯ ಸರ್ಕಾರ ಜಾರಿಗೆ ತಂದಿರುವ ಪಂಚ ಗ್ಯಾರಂಟಿಗಳನ್ನು ಅರ್ಹ ಫಲಾನುಭವಿಗಳಿಗೆ ತಲುಪಿಸುವುದು ಅಧಿಕಾರಿಗಳ ಜವಾಬ್ದಾರಿಯಾಗಿದ್ದು, ಯೋಜನೆಗಳ ಅನುಷ್ಠಾನದಲ್ಲಿರುವ ತಾಂತ್ರಿಕ ತೊಂದರೆಗಳನ್ನು ಪರಿಹರಿಸಿ, ಫಲಾನುಭವಿಗಳಿಗೆ ಯೋಜನೆಗಳ ಸೌಲಭ್ಯ ಒದಗಿಸಿ ಎಂದು ಕೊಪ್ಪಳ ತಾಲ್ಲೂಕಾ ಮಟ್ಟದ ಪಂಚ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಅಧ್ಯಕ್ಷರಾದ ಬಾಲಚಂದ್ರನ್ ಎಸ್. ಅವರು ಅಧಿಕಾರಿಗಳಿಗೆ ಸೂಚಿಸಿದರು.

ಗುರುವಾರದಂದು ಮುನಿರಾಬಾದ ಡ್ಯಾಂ ಗ್ರಾಮ ಪಂಚಾಯತಿ ಸಭಾಂಗಣದಲ್ಲಿ ಆಯೋಜಿಸಿದ್ದ ಕೊಪ್ಪಳ ತಾಲೂಕಿನ ಪಂಚ ಗ್ಯಾರಂಟಿ ಯೋಜನೆಗಳ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಸಾರ್ವಜನಿಕರ ಅನುಕೂಲಕ್ಕಾಗಿ ರಾಜ್ಯ ಸರ್ಕಾರ ಪಂಚ ಗ್ಯಾರಂಟಿಗಳನ್ನು ಜಾರಿಗೆ ತಂದಿದ್ದು, ಯೋಜನೆಗಳನ್ನು ಸಮರ್ಪಕವಾಗಿ ಅನುಷ್ಠಾನಗೊಳಿಸಿ. ಗೃಹಲಕ್ಷ್ಮೀಯೋಜನೆಯಫಲಾನುಭವಿಗಳಿಗೆ ಹಣ ಜಮೆಯಾಗದೆ ಇದ್ದಲ್ಲಿ ಕೂಡಲೇ ಮೇಲಧಿಕಾರಿಗಳ ಗಮನಕ್ಕೆ ತಂದು ತಾಂತ್ರಿಕ ಸಮಸ್ಯೆ ಬಗೆಹರಿಸಿಕೊಡಬೇಕು ಎಂದು ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳಿಗೆ ತಿಳಿಸಿದರು.

ಎಲ್ಲಾ ನ್ಯಾಯ ಬೆಲೆ ಅಂಗಡಿಗಳಲ್ಲಿ ಆಹಾರ ಸಂಗ್ರಹಣೆ, ವಿತರಣೆ ಮತ್ತು ಆಹಾರ ಧಾನ್ಯ ಉಳಿದಿರುವ ಮಾಹಿತಿಯುಳ್ಳ ನಾಮಫಲಕಗಳನ್ನು ಅಳವಡಿಸಿರುವುದಿಲ್ಲವೆಂದು ಸದಸ್ಯರು ಸಭೆಯಲ್ಲಿ ತಿಳಿಸಿದಾಗ ಮಾಹಿತಿ ಫಲಕಗಳನ್ನು ಕೂಡಲೇ ಅಳವಡಿಸಲು ಕ್ರಮವಹಿಸಬೇಕೆಂದು ಅಧ್ಯಕ್ಷರು ಅಧಿಕಾರಿಗಳಿಗೆ ಸೂಚಿಸಿದರು. ಏಪ್ರಿಲ್ ಮಾಹೆಯಲ್ಲಿ ತಾಲೂಕ ಪಂಚಾಯತಿಯಲ್ಲಿ ಜರುಗಿದ ನ್ಯಾಯಬೆಲೆ ಅಂಗಡಿಗಳ ಸನ್ನದುದಾರರ ಸಭೆಗೆ ಹಾಜರಾಗದ ಸನ್ನದುದಾರರಿಗೆ ಆಹಾರ ಇಲಾಖೆಯಿಂದ ನೋಟಿಸ್‌ನೀಡುವಂತೆಸಭೆಯಲ್ಲಿಸದಸ್ಯರು ತಿಳಿಸಿದರು. ಈ ಬಗ್ಗೆ ಕ್ರಮ ವಹಿಸುವಂತೆ ಅಧ್ಯಕ್ಷರು ಅಧಿಕಾರಿಗಳಿಗೆ ಸೂಚಿಸಿದರು.

ಕೊಪ್ಪಳದಿಂದ ಹೊಸಪೇಟೆಗೆ ಹೋಗುವ ಎಲ್ಲಾ ಬಸ್ಸುಗಳು ಮುನಿರಾಬಾದ್ ಬಸ್ ನಿಲ್ದಾಣಕ್ಕೆ ಕಡ್ಡಾಯವಾಗಿ ಬರುವಂತೆ ಸಭೆಯಲ್ಲಿ ಅಧ್ಯಕ್ಷರು ಕಲ್ಯಾಣ ಕರ್ನಾಟಕ ಸಾರಿಗೆ ಅಧಿಕಾರಿಗಳಿಗೆ ಸೂಚಿಸಿದರು. ಅಲ್ಲದೆ ಊರ ಮುಂದಿನ ಪಿಳ್ಳೆ ಹೋಟೆಲ್ ಮುಂದುಗಡೆ ಬಸ್ ಕೋರಿಕೆಯ ನಿಲುಗಡೆ ಮಾಡಬೇಕೆಂದು ಸದಸ್ಯರು ತಿಳಿಸಿದರು.

ಯುವನಿಧಿ ಫಲಾನುಭವಿಗಳು ಪ್ರತಿ ತಿಂಗಳಿಗೊಮ್ಮೆ ಸ್ವಯಂ ಘೋಷಣೆ ಮಾಡುವುದು ಕಡ್ಡಾಯವಾಗಿತ್ತು. ಸ್ವಲ್ಪ ಬದಲಾವಣೆ ಮಾಡಿ ಪ್ರತಿ 3 ತಿಂಗಳಿಗೊಮ್ಮೆ ಸ್ವಯಂ ಘೋಷಣೆ ಮಾಡಿಕೊಳ್ಳುವುದು ಕಡ್ಡಾಯವಾಗಿರುತ್ತದೆಂದು ಅಧಿಕಾರಿಗಳು ಸಭೆಗೆ ಮಾಹಿತಿ ನೀಡಿದರು.

ಸಭೆಯಲ್ಲಿ ಕೊಪ್ಪಳ ತಾಲೂಕ ಪಂಚಾಯತಿಯ ಕಾರ್ಯನಿರ್ವಾಹಕ ಅಧಿಕಾರಿ ದುಂಡಪ್ಪ ತುರಾದಿ, ತಹಶೀಲ್ದಾರ ವಿಠ್ಠಲ್ ಚೌಗಲಾ, ಮುನಿರಾಬಾದ ಡ್ಯಾಂ ಗ್ರಾಮ ಪಂಚಾಯತಿ ಅಧ್ಯಕ್ಷರಾದ ಆಯೂಬ್ ಖಾನ್, ಉಪಾಧ್ಯಕ್ಷೆ ಸೌಭಾಗ್ಯ ನಾಗರಾಜ, ಸಮಿತಿಯ ಸದಸ್ಯರಾದ ದೇವರಾಜ ನಡುವಿನಮನಿ, ರಮೇಶ ಹ್ಯಾಟಿ, ಜ್ಯೋತಿ ಗೊಂಡಬಾಳ, ಸವಿತಾ ಗೊರಂಟ್ಲಿ, ಅನ್ನದಾನಸ್ವಾಮಿ, ಮೆಹಬೂಬಪಾಷಾ ಮಾನ್ವಿ, ಅನ್ವರ್ ಹುಸೇನ್ ಗಡಾದ ಪರಶುರಾಮ ಕೊರವರ, ಧರ್ಮರಾಜರಾವ್, ಲಕ್ಷ್ಮಣ ಡೊಳ್ಳಿನ ಹಾಗೂ ಪಂಚ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಅಧಿಕಾರಿಗಳು, ಮುನಿರಾಬಾದ್ ಡ್ಯಾಂ ಗ್ರಾಮ ಪಂಚಾಯತ ಪಿಡಿಓ ಮಹೇಶ್ ಸಜ್ಜನ, ತಾಲೂಕ ಪಂಚಾಯತಿ ಸಿಬ್ಬಂದಿಗಳು ಹಾಜರಿದ್ದರು.

# ಗೃಹಜ್ಯೋತಿ ಫಲಾನುಭವಿಗಳಿಗೆ ಸೂಚನೆ

**ಕೊಪ್ಪಳ :** ಗೃಹಜ್ಯೋತಿ ಯೋಜನೆಯಡಿ ರಾಜ್ಯದಲ್ಲಿನ ಪ್ರತಿಮನೆಗೆತಿಂಗಳಿಗೆಗರಿಷ್ಠ200ಯೂನಿಟ್‌ಗಳವರೆಗೆ ಬಳಕೆಯ ಮಿತಿಯಲ್ಲಿ ಪ್ರತಿ ಗೃಹಬಳಕೆ ಗ್ರಾಹಕರ ಮಾಸಿಕ ಸರಾಸರಿ ಬಳಕೆಯ(ಆರ್ಥಿಕ ವರ್ಷ 2022–23 ರ ಬಳಕೆಯ ಆಧಾರದನ್ವಯ) ಯೂನಿಟ್‌ಗಳ ಮೇಲೆ ಶೇ.10 ರಷ್ಟು ಹೆಚ್ಚಿನ ಬಳಕೆಯ ಮಿತಿಗೆ ಅನುಮತಿಸಿ, ಅದಕ್ಕನುಗುಣವಾಗಿ ವಿದ್ಯುತ್ ಬಿಲ್ಲಿನ ಮೊತ್ತವನ್ನು ಉಚಿತವಾಗಿ ಒದಗಿಸಲು ಹಾಗೂ 200 ಯೂನಿಟ್‌ಗಳ ಬಳಕೆ ಮೀರಿದ ಗ್ರಾಹಕರು ಪೂರ್ಣ ವಿದ್ಯುತ್ ಬಿಲ್ಲನ್ನು ಪಾವತಿಸಲು ಸರ್ಕಾರ ಆದೇಶಿಸಿದೆ. ಈ ಯೋಜನೆಯಡಿ ಗ್ರಾಹಕರು https://sevasindhugs.Karnataka.gov.in/ ನಲ್ಲಿ ನೋಂದಾಯಿಸಿಕೊಳ್ಳಬೇಕು. 200 ಯೂನಿಟ್‌ಗಳ ಬಳಕೆಯನ್ನು ಮೀರಿದ ಗ್ರಾಹಕರು ಸಂಪೂರ್ಣ ವಿದ್ಯುತ್ ಬಿಲ್ಲನ್ನು ಪಾವತಿಸಬೇಕು. ಗ್ರಾಹಕರು ಮಂಜೂರಾದ ಲೋಡ್‌ಗಿಂತ ಅಧಿಕ ವಿದ್ಯುತ್ ಬಳಕೆ ಮಾಡಿದಲ್ಲಿ ಜೆಸ್ಕಾಂನಿಂದ ನಿಯಮಾನುಸಾರ ದಂಡ ವಿಧಿಸಲಾಗುವುದು. ಆದ್ದರಿಂದ ಗ್ರಾಹಕರು ಹೆಚ್ಚಿನ ಲೋಡ್ ಅನ್ನು ಸಕ್ರಮಗೊಳಿಸಲು ಸಂಬಂಧಪಟ್ಟ ಜೆಸ್ಕಾಂ ಉಪ ವಿಭಾಗಕಚೇರಿಗಳಲ್ಲಿನೋಂದಾಯಿಸಿಕೊಳ್ಳಬೇಕೆಂದು ಜೆಸ್ಕಾಂ ಕೊಪ್ಪಳ ಕಾರ್ಯ ಮತ್ತು ಪಾಲನಾ ವಿಭಾಗದ ಕಾರ್ಯನಿರ್ವಾಹಕ ಅಭಿಯಂತರರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಮೆಟ್ರಿಕ್ ಪೂರ್ವ ವಿದ್ಯಾರ್ಥಿನಿಲಯಗಳ ಪ್ರವೇಶಕ್ಕೆ ಅರ್ಜಿ ಆಹ್ವಾನ

**ಕೊಪ್ಪಳ :** ಕೊಪ್ಪಳ ಜಿಲ್ಲೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಮೆಟ್ರಿಕ್ ಪೂರ್ವ ಬಾಲಕ/ಬಾಲಕಿಯರ ವಿದ್ಯಾರ್ಥಿ ನಿಲಯಗಳ ಪ್ರವೇಶಕ್ಕಾಗಿ ಹೊಸದಾಗಿ ಪ್ರವೇಶ ಬಯಸುವ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಮತ್ತು ಇತರೆ ಜನಾಂಗಗಳಿಗೆ ಸೇರಿದ ವಿದ್ಯಾರ್ಥಿಗಳಿಂದ 2025–26ನೇ ಸಾಲಿಗೆ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ.

ಅರ್ಜಿ ಸಲ್ಲಿಸಲು ಜೂನ್ 16 ಕೊನೆಯ ದಿನಾಂಕವಾಗಿದ್ದು, ಅರ್ಜಿ ಸಲ್ಲಿಸಲು ಪ್ರವರ್ಗ–1, ಎಸ್.ಸಿ. ಮತ್ತು ಎಸ್.ಟಿ. ವಿದ್ಯಾರ್ಥಿಗಳ ಪೋಷಕರ ವಾರ್ಷಿಕ ಆದಾಯ ರೂ. 2.50 ಲಕ್ಷ ಮತ್ತು ಪ್ರವರ್ಗ–2ಎ, 2ಬಿ, 3ಎ, 3ಬಿ ಇತರೆ ಹಿಂದುಳಿದ ವರ್ಗ ಹಾಗೂ ಇತರೆ ವರ್ಗದ ವಿದ್ಯಾರ್ಥಿಗಳ ಪೋಷಕರ ವಾರ್ಷಿಕ ಆದಾಯ ರೂ. 1 ಲಕ್ಷ ಮಿತಿಯಲ್ಲಿರಬೇಕು.

ಅರ್ಜಿಯನ್ನು ಇಲಾಖೆಯ ವೆಬ್‌ಸೈಟ್ https://shp.karnataka.gov.in/bcwdನಲ್ಲಿ ಸಲ್ಲಿಸಬೇಕು.

ತಾಲ್ಲೂಕುವಾರು ವಿದ್ಯಾರ್ಥಿನಿಲಯಗಳ ವಿವರ ಹಾಗೂ ವಿದ್ಯಾರ್ಥಿನಿಲಯದ ಪ್ರವೇಶಕ್ಕೆ ಇರಬೇಕಾದ ಅರ್ಹತೆ, ಸಲ್ಲಿಸಬೇಕಾದ ದಾಖಲೆಗಳ ವಿವರ ಮತ್ತು ಸರ್ಕಾರದ ಆದೇಶಕ್ಕಾಗಿ ಇಲಾಖೆಯ ವೆಬ್‌ಸೈಟ್ www.bcwd.karnataka.gov.inಗೆ ಭೇಟಿ ನೀಡಬಹುದು.

ಅರ್ಜಿ ಸಲ್ಲಿಸಲು ತಾಂತ್ರಿಕ ತೊಂದರೆಗಳಾದಲ್ಲಿ ಇ–ಮೇಲ್ bcwdhelpline@gmail.com ಮುಖಾಂತರ, ಸಹಾಯವಾಣಿ ಸಂಖ್ಯೆ: 8050770004, 8050770005 ಅಥವಾ ಜಿಲ್ಲಾ/ತಾಲ್ಲೂಕು ಅಧಿಕಾರಿಗಳು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಇವರನ್ನು ಅಗತ್ಯ ದಾಖಲೆಗಳೊಂದಿಗೆ ಸಂಪರ್ಕಿಸಬಹುದು ಎಂದು ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ತ್ಯಾಜ್ಯ ಸಂಗ್ರಹಣಾ ಶುಲ್ಕವನ್ನು ನಿಗದಿತ ಸಮಯದಲ್ಲಿ ಪಾವತಿಸಿ: ತಾ.ಪಂ ಅಕ್ಷರ ದಾಸೋಹ ನಿರ್ದೇಶಕ ಮಲ್ಲಿಕಾರ್ಜುನ

**ಕೊಪ್ಪಳ :** ಗ್ರಾಮದಲ್ಲಿ ತ್ಯಾಜ್ಯವನ್ನು ಗ್ರಾಮ ಪಂಚಾಯತಿಯಿಂದ ಸಂಗ್ರಹಿಸುತ್ತಿದ್ದು ಅದರ ನಿರ್ವಹಣೆಗಾಗಿ ತ್ಯಾಜ್ಯ ಸಂಗ್ರಹಣಾ ಶುಲ್ಕವನ್ನು ನಿಗದಿತ ದಿನಗಳ ಒಳಗೆ ಪಾವತಿಸಬೇಕೆಂದು ತಾಲೂಕ ಪಂಚಾಯತ ಅಕ್ಷರ ದಾಸೋಹ ಸಹಾಯಕ ನಿರ್ದೇಶಕ ಮಲ್ಲಿಕಾರ್ಜುನ ಕರೆ ನೀಡಿದರು.

ಮೇ16ರಂದುಕೊಪ್ಪಳತಾಲೂಕಿನಗೊಂಡಬಾಳಗ್ರಾಮಪಂಚಾಯತಿಯಿಂದ ಹಮ್ಮಿಕೊಳ್ಳಲಾಗಿದ್ದ ತ್ಯಾಜ್ಯ ಸಂಗ್ರಹಣಾ ಶುಲ್ಕ ವಸೂಲಾತಿ ಅಭಿಯಾನದಲ್ಲಿ ಭಾಗವಹಿಸಿ ಮನೆ, ವಾಣಿಜ್ಯ ಮಳಿಗೆ, ಹೋಟೆಲ್, ಅಂಗಡಿ ಮಾಲೀಕರಿಗೆ ಪ್ರತಿ ತಿಂಗಳು ಗ್ರಾಮ ಪಂಚಾಯತಿಗೆ ತ್ಯಾಜ್ಯ ಸಂಗ್ರಹಣಾ ಶುಲ್ಕವನ್ನು ನಿಗದಿತ ದಿನಗಳ ಒಳಗಾಗಿ ಪಾವತಿಸಬೇಕು. ಪ್ರತಿ ಮನೆಯಲ್ಲಿ ಹಸಿಕಸ, ಒಣ ಕಸ ಪ್ರತ್ಯೇಕಿಸಿ ಸ್ವಚ್ಛ ವಾಹಿನಿಗೆ ನೀಡಬೇಕು. ಇದರಿಂದ ಕಸವನ್ನು ಪ್ರತ್ಯೇಕಿಸಲು ಸಹಕಾರಿಯಾಗುತ್ತದೆ ಎಂದು ತಿಳಿಸಿದರು.

ಈಸಂದರ್ಭ ಎಸ್‌ಬಿಎಂ ಜಿಲ್ಲಾಐಇಸಿ ಸಂಯೋಜಕ ಮಾರುತಿ ನಾಯಕರ, ಗೊಂಡಬಾಳ ಪಿಡಿಓ ಜಯಲಕ್ಷ್ಮೀ, ತಾಲೂಕ ಐಇಸಿ ಸಂಯೋಜಕ ದೇವರಾಜ ಪತ್ತಾರ, ಗ್ರಾಮ ಪಂಚಾಯತ ಕಾರ್ಯದರ್ಶಿ ಗವಿಸಿದ್ದಯ್ಯ ಗಂಧದ, ಕರವಸೂಲಿಗಾರ ಮಹೇಶ, ಸಂಜೀವಿನಿ ಸಂಘದ ಕೃಷಿ ಸಖಿ ಶಿಲ್ಪಾ ಬನ್ನಿಮಠ, ಬ್ಯಾಂಕ್ ಸಖಿಗಳಾದ ನೇತ್ರಾವತಿ ಪೊಲೀಸ್ ಪಾಟೀಲ್, ಗಂಗಮ್ಮ ಬಳ್ಳಾರಿ, ಗ್ರಾಮ ಪಂಚಾಯತಿ ಸಿಬ್ಬಂದಿ ಹಾಜರಿದ್ದರು.



# ಮುದ್ರಾ ಯೋಜನೆಯಡಿ ಸಾಲ ಸೌಲಭ್ಯಕ್ಕಾಗಿ ಕೈಮಗ್ಗ ನೇಕಾರರಿಂದ ಅರ್ಜಿ ಆಹ್ವಾನ


**ಕೊಪ್ಪಳ :** ಕೈಮಗ್ಗ ಮತ್ತು ಜವಳಿ ಇಲಾಖೆಯಿಂದ 2025–26ನೇ ಸಾಲಿನ ಮುದ್ರಾ ಯೋಜನೆಯಡಿ ಕೈಮಗ್ಗ ನೇಕಾರರಿಗೆ ಮಗ್ಗ ಖರೀದಿಸಲು ಅಥವಾ ದುಡಿಮೆ ಬಂಡವಾಳಕ್ಕಾಗಿ ರಾಷ್ಟ್ರೀಕೃತ ಬ್ಯಾಂಕ್‌ನಿಂದ ಸಾಲ ಪಡೆಯಲು ಅವಕಾಶ ಕಲ್ಪಿಸಲಾಗಿದೆ.

ಮುದ್ರಾ ಯೋಜನೆಯಡಿ ಜಿಲ್ಲೆಗೆ 25 ಗುರಿ ನಿಗದಿಪಡಿಸಲಾಗಿದೆ. ಪ್ರತಿ ಫಲಾನುಭವಿಗೆ ರೂ.50,000/–ರಂತೆ ಶೇ.20 ಮಾರ್ಜಿನ್‌ಮನಿ ಪಡೆಯಲು ಅವಕಾಶವಿರುತ್ತದೆ. ಅರ್ಹ ಫಲಾನುಭವಿಗಳು ಯಾವುದೇ ಮಧ್ಯವರ್ತಿಗಳನ್ನು ಸಂಪರ್ಕಿಸದೆ ಮೇ 31ರ ಒಳಗಾಗಿ ಅಗತ್ಯ ದಾಖಲೆಗಳೊಂದಿಗೆ ನೇರವಾಗಿ ಉಪ ನಿರ್ದೇಶಕರ ಕಛೇರಿ, ಕೈಮಗ್ಗ ಮತ್ತು ಜವಳಿ ಇಲಾಖೆ, ಅಶೋಕ ಸರ್ಕಲ್ ಹತ್ತಿರ ಕೊಪ್ಪಳ, ದೂರವಾಣಿ ಸಂಖ್ಯೆ:08539–295469 ಯನ್ನು ಸಂಪರ್ಕಿಸಿ ಅರ್ಜಿ ಸಲ್ಲಿಸುವಂತೆ ಇಲಾಖೆಯ ಉಪ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ವಿಪತ್ತು ನಿರ್ವಹಣೆ: ಅಣಕು ಪ್ರದರ್ಶನ ಹೈಡ್ರೋಜನ್ ಟ್ಯಾಂಕ್ ಸ್ಫೋಟ: 25 ಕಾರ್ಮಿಕರ ರಕ್ಷಣೆ







**ಬೆಳಗಾವಿ :** ಬೆಳಗಾವಿ ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರದ ವತಿಯಿಂದ ವಿಪತ್ತು ಸಂದರ್ಭ ನಿರ್ವಹಣೆ ಕುರಿತು ರಕ್ಷಣಾತ್ಮಕ ಅಣಕು ಪ್ರದರ್ಶನ ಶನಿವಾರ ಹುಕ್ಕೇರಿ ತಾಲೂಕಿನ, ಕಣಗಲಾ ಇಂಡಸ್ಟ್ರಿಯಲ್ ಪ್ರದೇಶದಲ್ಲಿರುವ ಗೋಲ್ಡ್ ಪ್ಲಸ್ ಪ್ಯಾಕ್ಟರಿಯಲ್ಲಿ ನಡೆಯಿತು.

ಗೋಲ್ಡ್ ಪ್ಲಸ್ ಪ್ಯಾಕ್ಟಲ್ಲಿ ಹೈಡ್ರೋಜನ್ ಟ್ಯಾಂಕ್ ಸ್ಫೋಟಗೊಂಡ ಅವಘಡ ಸಂಭವಿಸಿದಲ್ಲಿ ಅದನ್ನು ನಿಯಂತ್ರಣಕ್ಕೆ ತರಲು ಹಾಗೂ ಅದರಿಂದಾಗುವ ಪರಿಣಾಮಗಳನ್ನು ತಗ್ಗಿಸುವ ದೃಷ್ಟಿಯಿಂದ ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರ ತುರ್ತಾಗಿ, ಪರಿಣಾಮಕಾರಿಯಾಗಿ ನಿಭಾಯಿಸುವ ನಿಟ್ಟಿನಲ್ಲಿ ಯಾವ ರೀತಿಯಲ್ಲಿ ವಿವಿಧ ಇಲಾಖೆಗಳು ಜಂಟಿಯಾಗಿ ಕಾರ್ಯನಿರ್ವಹಿಸುತ್ತವೆ ಎಂಬುದರ ಬಗ್ಗೆ ಈ ಅಣಕು ಪ್ರದರ್ಶನವನ್ನು ಕೈಗೊಳ್ಳಲಾಯಿತು.

ಹುಕ್ಕೇರಿ ತಹಶೀಲ್ದಾರರು ಹಾಗೂ ಅಗ್ನಿ ಶಾಮಕ ದಳದ ಅಧೀಕ್ಷಕ ಶಶಿಧರ್ ನೀಲಗಾರ ಜಿಲ್ಲಾ ಕಾರ್ಖಾನೆಗಳ ಉಪ ನಿರ್ದೇಶಕ ವೆಂಕಟೇಶ ರಾಠೋಡ ಇವರ ನಿರ್ದೇಶನದಂತೆ ಅಣಕು ಪ್ರದರ್ಶನ ಜರುಗಿತು.

ಸನ್ನಿವೇಶದಲ್ಲಿ ಹೈಡ್ರೋಜನ್ ಟ್ಯಾಂಕ್ ಸ್ಫೋಟಗೊಂಡು ಪ್ರಯುಕ್ತ ಅಲ್ಲಿ ಕೆಲಸ ನಿರ್ವಹಿಸುತ್ತಿರುವ 25 ಜನ ಕಾರ್ಮಿಕರನ್ನು ರಕ್ಷಿಸುವುದು ಮತ್ತು ಗಾಯಾಳುಗಳಿಗೆ ಚಿಕಿತ್ಸೆ ನೀಡುವ ಕುರಿತು ಮೆಡಿಕಲ್ ಪೋಸ್ಟ್‌ಗಳಲ್ಲಿ ಪ್ರಥಮ ಚಿಕಿತ್ಸೆ ನೀಡುವುದು ಮತ್ತು ಹೆಚ್ಚಿನ ಚಿಕಿತ್ಸೆ ಮಾಡುವ ಅವಶ್ಯಕತೆ ಇದ್ದರೆ ಅವರನ್ನು ತಾಲೂಕು ಆಸ್ಪತ್ರೆಗೆ ಅಥವಾ ಜಿಲ್ಲಾ ಆಸ್ಪತ್ರೆಗೆ ಕಳುಹಿಸುವ ಕುರಿತು ಅಣುಕು ಪ್ರದರ್ಶನ ಮಾಡಲಾಯಿತು.

ಅದರಂತೆ ಹೆಚ್ಚು ಗಾಯಗೊಂಡಿರುವ 10 ಗಾಯಾಳುಗಳನ್ನು ಸಂಕೇಶ್ವರ ದಲ್ಲಿರುವ ಸರ್ಕಾರಿ ಆಸ್ಪತ್ರೆಗೆ, ಹಾಗೂ 10 ಜನ ಗಾಯಾಳುಗಳನ್ನು ಹೆಚ್ಚಿನ ಚಿಕಿತ್ಸೆಗಾಗಿ ಆಂಬುಲೆನ್ಸ್ ಮೂಲಕ ಜಿಲ್ಲಾ ಆಸ್ಪತ್ರೆಗೆ ಮತ್ತು 5 ಜನ ಸಣ್ಣ ಪ್ರಮಾಣದಲ್ಲಿ ಗಾಯಗೊಂಡ ಗಾಯಾಳುಗಳನ್ನು ಪ್ರಥಮ ಚಿಕಿತ್ಸೆ ಮಾಡಲಾಯಿತು,

2 ಕಾರ್ಮಿಕರು ಮರಣಹೊಂದಿದ್ದು ಅವರನ್ನು ಮರಣೋತ್ತರ ಪರೀಕ್ಷೆಗಾಗಿ ಸರ್ಕಾರಿ ಆಸ್ಪತ್ರೆಗೆ ಕಳುಹಿಸಲಾಯಿತು.

ಈ ಅಣಕು ಪ್ರದರ್ಶನದಲ್ಲಿ, ಎಸ್.ಡಿ.ಆರ್.ಎಫ್ ಉಪ ಸಮಾಧಿಷ್ಟರಾದ ಶರಣಬಸವ, ಅಪರ ಜಿಲ್ಲಾ ಕುಟುಂಬ ಕಲ್ಯಾಣ್ ಅಧಿಕಾರಿ ಚಿಕ್ಕೋಡಿ,

ಜಿಲ್ಲಾಧಿಕಾರಿ ಕಚೇರಿಯ ಜಿಲ್ಲಾ ವಿಪತ್ತು ನಿರ್ವಹಣಾ ಪರಿಣಿತ ನಿಂಗನಗೌಡ ಚನಬಸನಗೌಡರ ಅಣಕು ಪ್ರದರ್ಶನದಲ್ಲಿ ಪಾಲ್ಗೊಂಡಿದ್ದರು.

ಗೋಲ್ಡ್ ಪ್ಲಸ್ 200 ಸಿಬ್ಬಂದಿಗಳು, 13 ಅಗ್ನಿಶಾಕದಳದ ಸಿಬ್ಬಂದಿಗಳು, ಎಸ್.ಡಿ.ಆರ್.ಎಫ್ 16, 30 ವೈದ್ಯಕೀಯ ಸಿಬ್ಬಂದಿ, ಕಂದಾಯ ಇಲಾಖೆಯ 20 ಜನ ಸಿಬ್ಬಂದಿ ಅಣಕು ಪ್ರದರ್ಶನದಲ್ಲಿ ಭಾಗಿಯಾಗಿದ್ದರು.

# ರಂಗ ಸೃಷ್ಟಿಯಿಂದ ಕೃತಜ್ಞತಾ ಸಮರ್ಪಣೆ ಕಾರ್ಯಕ್ರಮ



**ಬೆಳಗಾವಿ :** ಹೇಮರಡ್ಡಿ ಮಲ್ಲಮ್ಮ ನಾಟಕವನ್ನು ಅತ್ಯಂತ ಯಶಸ್ವಿಯಾಗಿ ಪ್ರದರ್ಶಿಸಿದ ಹಿನ್ನೆಲೆಯಲ್ಲಿ ರಂಗಸೃಷ್ಟಿತಂಡದ ಕಲಾವಿದರಿಗೆ ಕೃತಜ್ಞತೆ ಸಮರ್ಪಣೆ ಕಾರ್ಯಕ್ರಮ ಈಚೆಗೆ ನಡೆಯಿತು.

ಬೆಳಗಾವಿಯ ಸ್ಕೌಟ್ಸ್ ಸಭಾಭವನದಲ್ಲಿ ನಡೆದ ಕಾರ್ಯಕ್ರಮದಲ್ಲಿ ಎಲ್ಲ ಕಲಾವಿದರಿಗೆ ಗೌರವ ಕಾಣಿಕೆ ನೀಡಿ ಸನ್ಮಾನಿಸಲಾಯಿತು.

ರಂಗಸೃಷ್ಟಿ ಅಧ್ಯಕ್ಷ ರಮೇಶ ಜಂಗಲ್ ಅವರು ಮಾತನಾಡಿ, ನಿರೀಕ್ಷೆಗೂ ಮೀರಿ ನಾಟಕ ಯಶಸ್ವಿಯಾಗಿದೆ. ಸಭಾಭವನ ಕಿಕ್ಕಿರಿದು ತುಂಬಿದ್ದರಿಂದ ನೂರಾರು ಜನರು ವಾಪಸ್ ಹೋಗಬೇಕಾಯಿತು. ಇದರ ಶ್ರೇಯಸ್ಸು ಎಲ್ಲ ಕಲಾವಿದರಿಗೆ ಸಲ್ಲುತ್ತದೆ. ಹಾಗಾಗಿ ಎಲ್ಲ ಕಲಾವಿದರಿಗೆ ಧನ್ಯವಾದ ಮತ್ತು ಅಭಿನಂದನೆಗಳನ್ನು ಸಲ್ಲಿಸುತ್ತೇನೆ. ಬೇರೆಬೇರೆ ಕಡೆಗಳಿಂದ ಸಹ ನಾಟಕ ಪ್ರದರ್ಶನಕ್ಕೆ ಬೇಡಿಕೆ ಬರುತ್ತಿದೆ. ಆದಷ್ಟು ಶೀಘ್ರದಲ್ಲಿ ಧಾರವಾಡ ಮತ್ತು ಗದಗದಲ್ಲಿ ಪ್ರದರ್ಶನ ಹಮ್ಮಿಕೊಳ್ಳಲಾಗುವುದು ಎಂದರು.

ನಾಟಕ ರಚನೆಕಾರ ಡಾ.ರಾಮಕೃಷ್ಣ ಮರಾಠೆ, ಹೊಸಬರೂ ಸೇರಿದಂತೆ ಎಲ್ಲ ಕಲಾವಿದರೂ ಅತ್ಯಂತ ಮನೋಜ್ಞವಾಗಿ ಅಭಿನಯಿಸುವ ಮೂಲಕ ನಾಟಕವನ್ನು ಯಶಸ್ವಿಗೊಳಿಸಿದ್ದಾರೆ. ಎಲ್ಲರಿಂದ ಉತ್ತಮ ಪ್ರತಿಕ್ರಿಯೆ ವ್ಯಕ್ತವಾಗಿದೆ ಎಂದರು.

ಇದೇ ವೇಳೆ, ನಾಟಕ ನಿರ್ದೇಶಕ ಶಿರೀಶ್ ಜೋಶಿ ದಂಪತಿಯ ವಿವಾಹ ವಾರ್ಷಿಕೋತ್ಸವ ಆಚರಿಸಿ, ಚಾರ್ ಧಾಮ ಪ್ರವಾಸಕ್ಕೆ ಹೊರಟಿರುವ ಸಂದರ್ಭದಲ್ಲಿ ಶುಭ ಕೋರಲಾಯಿತು. ಧಾರವಾಡ ಕರ್ನಾಟಕ ವಿಶ್ವವಿದ್ಯಾಲಯದ ವೇಮನ ಅಧ್ಯಯನ ಪೀಠದ ಸಂಯೋಜಕ ಎಚ್.ಬಿ.ನೀಲಗುಂದ ದಂಪತಿ ಉಪಸ್ಥಿತರಿದ್ದರು.

ರಂಗಸೃಷ್ಟಿಯ ಎಲ್ಲ ಪದಾಧಿಕಾರಿಗಳು ಹಾಗೂ ಕಲಾವಿದರು ಕುಟುಂಬ ಸಮೇತ ಉಪಸ್ಥಿತರಿದ್ದರು.

# ಸಚಿವೆ ಲಕ್ಷ್ಮೀ ಹೆಬ್ಬಾಳಕರ್ ಅವರಿಂದ ಅಭಿವೃದ್ಧಿಯ ಜೊತೆಗೆ ಸಮಾಜಮುಖೀ ಕೆಲಸ: ಸತೀಶ್ ಜಾರಕಿಹೊಳಿ ಪ್ರಶಂಸೆ



**ಸುಳೇಬಾವಿ (ಬೆಳಗಾವಿ) :** ಸಚಿವೆ ಲಕ್ಷ್ಮೀ ಹೆಬ್ಬಾಳಕರ ಮತ್ತು ವಿಧಾನ ಪರಿಷತ್ ಸದಸ್ಯ ಚನ್ನರಾಜ ಹಟ್ಟಿಹೊಳಿ ಅವರು ಅಭಿವೃದ್ಧಿ ಜತೆಗೆ ಸಮಾಜಮುಖಿ ಕೆಲಸಗಳನ್ನೂ ಮಾಡುತ್ತಿದ್ದಾರೆ ಎಂದು ಲೋಕೋಪಯೋಜಿ ಸಚಿವರೂ,ಬೆಳಗಾವಿ ಜಿಲ್ಲಾ ಉಸ್ತುವಾರಿ ಸಚಿವರೂ ಆಗಿರುವ ಸತೀಶ ಜಾರಕಿಹೊಳಿ ಪ್ರಸಂಸಿಸಿದರು.

ಸುಳೇಭಾವಿ ಗ್ರಾಮದಲ್ಲಿ ಸಚಿವೆ ಲಕ್ಷ್ಮೀ ಹೆಬ್ಬಾಳಕರ್ ಮತ್ತು ವಿಧಾನ ಪರಿಷತ್ ಸದಸ್ಯ ಚನ್ನರಾಜ ಹಟ್ಟಿಹೊಳಿ ಅವರು ಸ್ವಂತ ಹಣದಿಂದಪ್ರತಿಷ್ಠಾಪಿಸಿರುವಛತ್ರಪತಿಶಿವಾಜಿ ಮಹಾರಾಜರ ನೂತನ ಮೂರ್ತಿಯನ್ನು ಭಾನುವಾರ ಸಂಜೆ ಅನಾವರಣಗೊಳಿಸಿ ಅವರು ಮಾತನಾಡಿದರು.

ಇದೊಂದು ಐತಿಹಾಸಿಕ ದಿನ. ಇಲ್ಲಿ ಶಿವಾಜಿ ಮಹಾರಾಜರ ಭವ್ಯ ಮೂರ್ತಿ ಆಗಬೇಕೆಂದು ಬಹಳ ವರ್ಷದ ಕನಸಿತ್ತು. ಅದನ್ನು ಹೆಬ್ಬಾಳಕರ ಮತ್ತು ಹಟ್ಟಿಹೊಳಿ ನೆರವೇರಿಸಿದ್ದಾರೆ. ಸರ್ಕಾರದ ಹಣದಲ್ಲಿ ಇಂತಹ ಮೂರ್ತಿ ಸ್ಥಾಪಿಸಲು ಅವಕಾಶ ಕಡಿಮೆ. ಆದರೆ ಹೆಬ್ಬಾಳಕರ ಅವರು ಸ್ವಂತ ಹಣದಿಂದ ನೆರವೇರಿಸಿದ್ದಾರೆ.

ಅಭಿವೃದ್ಧಿ ಜೊತೆಗೆ ಸಮಾಜಮುಖಿ ಕೆಲಸವನ್ನೂ ಮಾಡುತ್ತಿದ್ದಾರೆ ಎಂದು ಪ್ರಶಂಸಿಸಿದರು.

ನಮ್ಮಸರ್ಕಾರಜನಪರಕೆಲಸಮಾಡುತ್ತಿದ್ದು, ಗ್ಯಾರಂಟಿ ಯೋಜನೆಗಳು ಜನರ ಬದುಕು ಕಟ್ಟಲು ಸಹಕಾರಿಯಾಗಿವೆ. ಗೃಹಲಕ್ಷ್ಮೀ ಹಣವಂತೂ ಬಡವರ ಮಕ್ಕಳ ವಿದ್ಯಾಭ್ಯಾಸ, ವೈದ್ಯಕೀಯ ವೆಚ್ಚ ಸೇರಿದಂತೆ ಅನೇಕ ಕೆಲಸಗಳಿಗೆ ಸಹಕಾರಿಯಾಗಿದೆ. ಬುದ್ಧ, ಬಸವಣ್ಣ, ಅಂಬೇಡ್ಕರ್ ನಮಗೆಲ್ಲರಿಗೂ ಆದರ್ಶ ಎಂದರು.

ಛತ್ರಪತಿ ಶಿವಾಜಿ ಮಹಾರಾಜರ ತಂದೆ ಶಹಾಜಿ ಮಹಾರಾಜರ ಸಮಾಧಿ ಇರುವ ಚನ್ನಗಿರಿ ತಾಲೂಕಿನ ಹೊದಗೆರೆ ಗ್ರಾಮದಲ್ಲಿ ಭವ್ಯ ಸ್ಮಾರಕ ಮಾಡಲು ಲೋಕೋಪಯೋಗಿ ಇಲಾಖೆಯಿಂದ 5 ಕೋಟಿ ರೂ. ಅನುದಾನವನ್ನು ಬಿಡುಗಡೆ ಮಾಡಲಾಗಿದ್ದು, ಇನ್ನು ಕೆಲವೇ ದಿನಗಳಲ್ಲಿ ಕೆಲಸ ಆರಂಭವಾಗಲಿದೆ ಎಂದು ಸತೀಶ ಜಾರಕಿಹೊಳಿ ತಿಳಿಸಿದರು.

ಸುಳೇಭಾವಿ ಗ್ರಾಮದಲ್ಲಿ ಯಾವುದೇ ಜಾತಿ, ಧರ್ಮದ ಭೇದ ಭಾವ ಇಲ್ಲದೇ ಇರುವುದು ಹೆಮ್ಮೆಯ ವಿಷಯ.

ಶಿವಾಜಿ ಮಹಾರಾಜರ ಹೋರಾಟ, ಆದರ್ಶ ನಮಗೆಲ್ಲರಿಗೂ ಪ್ರೇರಣೆ. ಇಂಥ ಕಾರ್ಯಕ್ರಮಗಳು ನಮಗೆ ದಾರಿದೀಪ ಆಗಬೇಕು. ಸುಂದರವಾದ ಸ್ಮಾರಕ ನಿರ್ಮಾಣ ಮಾಡಿರುವುದು ಸಂತೋಷದ ವಿಷಯ. ಇಡೀ ಜಿಲ್ಲೆಯಲ್ಲೇ ಇಂತಹ ಸುಂದರಮೂರ್ತಿಬೇರೆಲ್ಲೂಇಲ್ಲಎಂದರು.

ಲಕ್ಷ್ಮೀ ಹೆಬ್ಬಾಳಕರ್ ಮತ್ತು ಚನ್ನರಾಜ ಹಟ್ಟಿಹೊಳಿ ಅವರು ಸತೀಶ್ ಜಾರಕಿಹೊಳಿ ಅವರನ್ನು ಸನ್ಮಾನಿಸಿದರು.

# ವರ್ಲ್ಡ್ ಟೆಲಿಕಮ್ಯುನಿಕೇಷನ್, ಇನಫಾರ್ಮೆಷ್ನ ಸೊಸಾಯಟಿ ದಿನಾಚರಣೆ




**ಬೆಳಗಾವಿ :** ದಿ. ಇನ್‌ಸ್ಟಿಟ್ಯೂಷನ್ ಆಫ್ ಇಂಜಿನೀಯರ್ಸ ಸ್ಥಾನಿಕ ಕೇಂದ್ರ ಬೆಳಗಾವಿ ಹಾಗೂ ಜೈನ್ ಕಾಲೇಜ ಆಫ್ ಇಂಜಿನಿಯರಿಂಗ್,ಮಚ್ಛೆ ಇವರ ಸಹಯೋಗದಲ್ಲಿ ದಿನಾಂಕ:17–05–2025 ರಂದು ವರ್ಲ್ಡ್ ಟೆಲಿಕಮ್ಯುನಿಕೇಷನ್, ಇನಫಾರ್ಮೆಷನ್ ಸೊಸಾಯಟಿ ದಿನಾಚರಣೆಯನ್ನುಆಚರಿಸಲಾಯಿತು. ಬಿ.ಎಸ್.ಎನ್.ಎಲ್ ಸಹಾಯಕ ವ್ಯವಸ್ಥಾಪಕರಾದ ಉತ್ತಮ ಎಲಿಗಾರ ಅವರು "ಜಂಡರ ಇಕ್ವಾಲಿಟಿ ಇನ್ ಡಿಜಿಟಲ್ ಟ್ರಾನ್ಸಫಾರ್ಮೆಷನ್" ಕುರಿತು ಮಾತನಾಡಿ ಡಿಜಿಟಲ್ ಟ್ರಾನ್ಸಫಾರ್ಮೆಷನ್‌ನಲ್ಲಿ ಮಹಿಳೆಯರ ಪಾತ್ರದ ಕುರಿತು ವಿವರಿಸದರು.

ಕಾರ್ಯಕ್ರಮದಲ್ಲಿ ಪ್ರೊ. ಜೆ.ಶಿವಕುಮಾರ, ಜಯಶ್ರೀ ರೂಡಗಿ, ಎಸ್.ವಾಯ್.ಕುಂದರಗಿ, ಬಿ.ವೆಂಕಟೇಷ, ಬಿ.ಜಿ.ಧರಣಿ, ಸಿ.ಬಿ.ಹಿರೇಮಠ, ಬಿ.ಎಂ.ಕಳಿಗುಡ್ಡ ಎಮ್.ಪಿ.ಮೇತ್ರಿ ಹಾಗೂ ಜೈನ್ ಕಾಲೇಜಿನ ಅಧ್ಯಾಪಕ ವರ್ಗ ಮತ್ತು ವಿದ್ಯಾರ್ಥಿಗಳು ಉಪಸ್ಥಿತರಿದ್ದರು.



ರಬಕವಿ–ಬನಹಟ್ಟಿ : ಇತ್ತೀಚಿಗೆ ಜಿಲ್ಲೆಯ ಅನಗವಾಡಿಯಲ್ಲಿ ನಡೆದ ಬಾಗಲಕೋಟೆ ಜಿಲ್ಲಾ ಎರಡನೇ ಜನಪದ ಸಮ್ಮೇಳನದಲ್ಲಿ ತಾಲೂಕಿನ ರಬಕವಿಯ ವಿನೋದ ಸಾಹಿತಿ ಯಶವಂತ ವಾಜಂತ್ರಿ, ಸಾಮಾಜಿಕ ಕಾರ್ಯಕರ್ತ, ಕನ್ನಡಾಭಿಮಾನಿ ಚಿದಾನಂದ ಸೊಲ್ಲಾಪೂರ, ತಾಲೂಕು ಅಧ್ಯಕ್ಷ ಆರ್. ವಿ. ಗೌಡರ ಅವರನ್ನು ಸನ್ಮಾನಿಸಿ ಗೌರವಿಸಲಾಯಿತು.



ರಬಕವಿ–ಬನಹಟ್ಟಿ : ಇತ್ತೀಚಿಗೆ ಜಿಲ್ಲೆಯ ಅನಗವಾಡಿಯಲ್ಲಿ ನಡೆದ ಬಾಗಲಕೋಟೆ ಜಿಲ್ಲಾ ಎರಡನೇ ಜನಪದ ಸಮ್ಮೇಳನದಲ್ಲಿ ತಾಲೂಕಿನ ನಾವಲಗಿಯ ಸಂಬಾಳವಾದಕ ವಿಶ್ವನಾಥ ದೇವದಾಸ ಅವರನ್ನು ಸನ್ಮಾನಿಸಿ ಗೌರವಿಸಲಾಯಿತು.



ಮಳೆಗೆ ನೇಕಾರನ ಮನೆ ಕುಸಿತ. ರಬಕವಿ ಬನಹಟ್ಟಿ: ಅವಳಿ ನಗರದಲ್ಲಿ ಕಳೆದೆರಡು ದಿನಗಳಿಂದ ಭಾರಿ ಮಳೆಯಾಗಿದ್ದು, ಹಾಗೂ ರಭಸದ ಗಾಳಿಯಿಂದಾಗಿ ರಬಕವಿಯ ಕುಂಬಾರ ಓಣಿಯ ಶ್ರೀಶೈಲ ಮಲ್ಲಪ್ಪ ಬುರ್ಲಿ ಇವರ ಮನೆಯ ಮೇಲ್ಛಾವಣಿ ಹಾಗೂ ಗೋಡೆಗಳು ಕುಸಿತಗೊಂಡಿದ್ದು, ಅದೃಷ್ಟವಶಾತ ಯಾವುದೇ ಪ್ರಾಣಹಾನಿ ಸಂಭವಿಸಿಲ್ಲ.

# ಸಚಿವ ಕುನ್ವರ್ ವಿಜಯ್ ಶಾ ವಿರುದ್ಧ ರಾಷ್ಟ್ರೀಯ ಅಲ್ಪಸಂಖ್ಯಾತರ ಆಯೋಗಕ್ಕೆ ದೂರು

**ಕಲಬುರಗಿ :** ಕರ್ನಲ್ ಸೋಫಿಯಾ ಖುರೇಷಿ ವಿರುದ್ಧ ಕೋಮು ಆರೋಪದ ಹೇಳಿಕೆಗಳಿಗಾಗಿ ಮಧ್ಯಪ್ರದೇಶ ಸರ್ಕಾರದ ಕ್ಯಾಬಿನೆಟ್ ದರ್ಜೆಯ ಸಚಿವರಾದ ಕುನ್ವರ್ ವಿಜಯ್ ಶಾ ಅವರ ವಿರುದ್ಧ ದೂರು ದಾಖಲಿಸುವಂತೆ ಕರ್ನಾಟಕ ಪ್ರದೇಶ ಕಾಂಗ್ರೆಸ್ ಸಮಿತಿಯ (ಕೆಪಿಸಿಸಿ) ಅಲ್ಪಸಂಖ್ಯಾತ ವಿಭಾಗದ ನೆತೃತ್ವದಲ್ಲಿ ಜಿಲ್ಲಾಧಿಕಾರಿಗಳಿಗೆ ಬೇಡಿಕೆಯ ಮನವಿ ಸಲ್ಲಿಸಲಾಯಿತು.

ಮಧ್ಯಪ್ರದೇಶದ ಸರ್ಕಾರದ ಸಚಿವರಾದ ಕುನ್ವರ್ ವಿಜಯ್ ಶಾ ಅವರು ತೀವ್ರ ಆಕ್ರಮಣಕಾರಿ, ಬೇಜವಾಬ್ದಾರಿ ಮತ್ತು ಕೋಮುವಾದದ ಹೇಳಿಕೆಗಳಿಗಾಗಿ ಭಾರತೀಯ ಸೇನೆಯ ಅಲಂಕೃತ ಅಧಿಕಾರಿ ಕರ್ನಲ್ ಸೋಫಿಯಾ ಖುರೇಷಿ ಅವರನ್ನು ಅಪಮಾನಿಸಿರುವ ಪ್ರಕರಣದ ಬಗ್ಗೆ ಕ್ರಮ ಕೈಗೊಳ್ಳುವಂತೆ ರಾಜ್ಯಪಾಲರಿಗೆ ಮತ್ತು ರಾಷ್ಟ್ರೀಯ ಅಲ್ಪಸಂಖ್ಯಾತರ ಆಯೋಗಕ್ಕೆ ದೂರು ನೀಡಿ ಒತ್ತಾಯಿಸಲಾಯಿತು.

ಇತ್ತೀಚಿನ ಸಾರ್ವಜನಿಕ ಭಾಷಣದಲ್ಲಿ ಕುನ್ವರ ಶಾ ಅವರು. ಕರ್ನಲ್ ಖುರೇಷಿ ಅವರನ್ನು "ಭಯೋತ್ಪಾದಕರ ಸಹೋದರಿ" ಎಂದು ಲೇಬಲ್ ಮಾಡಿದರು, ಇದು ವಾಸ್ತವಿಕವಾಗಿ ಆಧಾರರಹಿತವಾಗಿರದೆ ಉದ್ದೇಶ ಪೂರ್ವಕವಾಗಿ ಪ್ರಚೋದನಕಾರಿ ಮತ್ತು ಕೋಮು ಪೂರ್ವಾಗ್ರಹಪಿಡಿತವಾಗಿದೆ.

ಕ್ಯಾಬಿನೆಟ್–ಶ್ರೇಣಿಯ ಸಾರ್ವಜನಿಕ ಸೇವಕನಿಂದ ಬಂದಿರುವ ಇಂತಹ ವಾಕ್ಚಾತುರ್ಯವು ನೈತಿಕವಾಗಿ ಖಂಡನೀಯವಲ್ಲ ಆದರೆ



ಕಾನೂನುಬದ್ಧವಾಗಿ ಶಿಕ್ಷಾರ್ಹವಾಗಿದೆ, ಕೋಮುವಾದ ಪ್ರಚೋದಿಸುವ ಮತ್ತು ಸಾರ್ವಜನಿಕ ಸುವ್ಯವಸ್ಥೆಗೆ ಭಂಗ ತರುವ ಹೇಳಿಕೆ ಅವರದಾಗಿದೆ.

ಮಧ್ಯಪ್ರದೇಶ ಹೈಕೋರ್ಟ್ ಸಚಿವರ ಈ ಹೇಳಿಕೆಗಳನ್ನು ಸ್ವಯಂಪ್ರೇರಿತವಾಗಿ ಗುರುತಿಸಿ, ಅವುಗಳನ್ನು ಕ್ಯಾನ್ಸರ್ ಮತ್ತು ಅಪಾಯಕಾರಿ ಎಂದು ಲೇಬಲ್ ಮಾಡಿತು ಮತ್ತು ಗುಂಪುಗಳ ನಡುವೆ ದ್ವೇಷವನ್ನು ಉತ್ತೇಜಿಸಲು ಮತ್ತು ಸಾರ್ವಜನಿಕ ಶಾಂತಿಗೆ ಅಪಾಯವನ್ನುಂಟುಮಾಡುವುದಕ್ಕಾಗಿ ಭಾರತೀಯ ನ್ಯಾಯ ಸಂಹಿತೆಯ ಸೆಕ್ಷನ್‌ಗಳ ಅಡಿಯಲ್ಲಿ ಎಫ್‌ಐಆರ್ ದಾಖಲಿಸಲು ಪೊಲೀಸರಿಗೆ ಆದೇಶಿಸಿದೆ ಭಾರತದ ಗೌರವಾನ್ವಿತ ಸುಪ್ರೀಂ ಕೋರ್ಟ್ ಸಹ ಸಚಿವರಾದ ಕುನ್ವರ ಶಾ ಅವರನ್ನು ಖಂಡಿಸಿದೆ.

ಬಿಜೆಪಿಯಹಿರಿಯನಾಯಕಿಉಮಾಭಾರತಿ ಸೇರಿದಂತೆ ಪ್ರಮುಖ ನಾಯಕರು ಸಚಿವ ಶಾ ಅವರನ್ನು ಪದಚ್ಯುತಗೊಳಿಸುವಂತೆ ಕರೆ ನೀಡಿದರು ಮತ್ತು ಸಾಂವಿಧಾನಿಕ ನಡವಳಿಕೆಯ ಉಲ್ಲಂಘನೆಗಾಗಿ ಅವರನ್ನು ವಜಾಗೊಳಿಸುವಂತೆ ವಿರೋಧ ಪಕ್ಷಗಳು ಒತ್ತಾಯಿಸಿವೆ. ಅಂತಹ ಹೇಳಿಕೆಗಳು ನಮ್ಮ ಸಶಸ್ತ್ರ ಪಡೆಗಳನ್ನು ಅವಮಾನಿಸುತ್ತವೆ, ಅಲ್ಪಸಂಖ್ಯಾತ ಸಮುದಾಯವನ್ನು ನಿಂದಿಸುತ್ತವೆ ಮತ್ತು ಜಾತ್ಯತೀತತೆ ಮತ್ತು ಏಕತೆಯ ಸಾಂವಿಧಾನಿಕ ಮೌಲ್ಯಗಳನ್ನು ದುರ್ಬಲಗೊಳಿಸುತ್ತವೆ.

ಅವರ ವಿರುದ್ಧ ಅನ್ವಯವಾಗುವ ಸೆಕ್ಷನ್‌ಗಳ ಅಡಿಯಲ್ಲಿ (ಭಾರತೀಯ ದಂಡ ಸಂಹಿತೆ/ಭಾರತೀಯ ನ್ಯಾಯ ಸಂಹಿತೆಯ ಸೆಕ್ಷನ್ 153ಂ, 295ಂ, ಮತ್ತು 505 ಸೇರಿದಂತೆ) ಕ್ರಿಮಿನಲ್ ದೂರನ್ನು ದಾಖಲಿಸಬೇಕು.

ಈದೂರಿನಪ್ರತಿಯನ್ನುಮತ್ತುತೆಗೆದುಕೊಂಡ ಕ್ರಮವನ್ನು ಗೌರವಾನ್ವಿತ ರಾಜ್ಯಪಾಲರು ಮತ್ತು ರಾಷ್ಟ್ರೀಯ ಅಲ್ಪಸಂಖ್ಯಾತರ. ಆಯೋಗಕ್ಕೆ ರವಾನಿಸಬೇಕು.ಲಗತ್ತುಗಳನ್ನು ಲಗತ್ತಿಸಲಾಗಿದೆ, ಸಚಿವ ಶಾ ಅವರ ಸಾರ್ವಜನಿಕ ಭಾಷಣದ ಪ್ರತಿಗಳು ಮತ್ತು ವೀಡಿಯೊ ತುಣುಕನ್ನು ಲಗತ್ತಿಸಲಾಗಿದೆ.

ಮಧ್ಯಪ್ರದೇಶ ಹೈಕೋರ್ಟ್ ನಿರ್ದೇಶನ ಮತ್ತು ಸುಪ್ರೀಂ ಕೋರ್ಟ್ ವೀಕ್ಷಣೆಯ ಪ್ರತಿ (ಸಾರ್ವಜನಿಕವಾಗಿ ಲಭ್ಯವಿರುವಲ್ಲಿ).ಈ ದೂರನ್ನು ಅನುಮೋದಿಸುವ ಕೆಪಿಸಿಸಿ ಅಲ್ಪಸಂಖ್ಯಾತರ ಇಲಾಖೆಯ ಸದಸ್ಯರ ಪಟ್ಟಿ. ನಮಗೆ ಸಂವಿಧಾನ ಮತ್ತು ಕಾನೂನಿನ ಮೇಲೆ ನಂಬಿಕೆ ಇದೆ. ಈ ಪತ್ರವು ಕೇವಲ ದೂರು ಅಲ್ಲ–ಇದು ನಮ್ಮ ಸಶಸ್ತ್ರ ಪಡೆಗಳ ಗೌರವವನ್ನು ಎತ್ತಿಹಿಡಿಯುವ ಪ್ರತಿಜ್ಞೆಯಾಗಿದೆ, ಕೋಮು ಸೌಹಾರ್ದತೆಯನ್ನು ರಕ್ಷಿಸುತ್ತದೆ ಮತ್ತು ಅಧಿಕಾರದಲ್ಲಿರುವವರಿಂದ ಹೊಣೆಗಾರಿಕೆಯನ್ನು ಕೇಳುತ್ತದೆ.

ಈ ಸಂದರ್ಭದಲ್ಲಿ ಅಧ್ಯಕ್ಷರು ನಯೀಮ್ ಖಾನ್‌ಜಿಲ್ಲಾ ಕಾಂಗ್ರೆಸ್ ಸಮಿತಿ ಅಲ್ಪಸಂಖ್ಯಾತರ ಇಲಾಖೆ ಕಲಬುರಗಿ, ನಜ್ಮುಲ್–ಉಲ್–ಇಸ್ಲಾಮ್ ಅಹ್ಮರ್, ಜಸ್ವೀರ್ ಸಿಂಗ್ ಚಾಬ್ರಾ , ನಿಮಿನಾಥ್ ಜೈನ್.ಸಂಧ್ಯಾ ರಾಜ್ ಸ್ಯಾಮ್ಯುಯೆಲ್, ಇಮ್ರಾನ್ ರಜ್ವಿ. ಅಥರ್ ಪರ್ವಿನ್ ನಾಡಗೌಡ, ಉಪಸ್ಥಿತರಿದ್ದರು.

# ಮಹಾದೇವ ವೆಂಕಟೇಶ ಕುಲಕರ್ಣಿ ನಿಧನ

**ಮಹಾಲಿಂಗಪುರ :** ಸಮೀಪದ ರನ್ನಬೆಳಗಲಿಪಟ್ಟಣದಹಿರಿಯರು, ಬಂದಲಕ್ಷ್ಮಿ ದೇವಸ್ಥಾನದ ಟ್ರಸ್ಟ್ ಹಿರಿಯರು, ಬ್ರಾಹ್ಮಣ ಸಮಾಜದ ಮುಖಂಡರಾದ ಮಹಾದೇವ (ಮೋಹನರಾವ) ವೆಂಕಟೇಶ ಕುಲಕರ್ಣಿ ತಮ್ಮ 86 ನೆಯ ವಯಸ್ಸಿನಲ್ಲಿ ಮೇ 20 ರಂದು ವೈಕುಂಠವಾಸಿಯಾದರು. ಮೃತರುತಮ್ಮಹಿಂದೆಪತ್ನಿ,ಇಬ್ಬರು ಪುತ್ರರು, ಸೊಸೆಯಂದಿರು, ಮೊಮ್ಮಕ್ಕಳು ಸೇರಿದಂತೆ ಅಪಾರ



ಬಂಧು ಬಳಗವನ್ನು ಅಗಲಿದ್ದಾರೆ.

ಸಂತಾಪ : ಮೃತರ ನಿಧನಕ್ಕೆ ಸಂಸದರಾದ ಪಿ. ಸಿ. ಗದ್ದಿಗೌಡರ, ಗೋವಿಂದ ಕಾರಜೋಳ, ಜಿಲ್ಲಾ ಉಸ್ತುವಾರಿ ಸಚಿವ ಆರ್. ಬಿ. ತಿಮ್ಮಾಪೂರ, ಮುಧೋಳ ತಾಲೂಕಾ ಬ್ರಾಹ್ಮಣ ಸಮಾಜದ ಉಪಾಧ್ಯಕ್ಷ ಪುಟ್ಟು ಕುಲಕರ್ಣಿ, ಹಿರಿಯರಾದ ಧರೆಪ್ಪ ಸಾಂಗ್ಲೀಕರ, ಅಲ್ಲಪ್ಪ ಸಂಕ್ರಟ್ಟಿ, ಮಲ್ಲು ಹೊಸಪೇಟಿ, ಲಕ್ಷ್ಮಣ ಶಿರೋಳ, ಕಾಡಯ್ಯ ಗಣಾಚಾರಿ, ಪಂಡಿತ ಪೂಜಾರಿ, ಸಿದ್ದುಗೌಡ ಪಾಟೀಲ, ಚಿಕ್ಕಪ್ಪ ನಾಯಕ ಸೇರಿದಂತೆ ಹಲವರು ಸಂತಾಪ ಸೂಚಿಸಿದ್ದಾರೆ.

# ಸಾಮಾಜಿಕ ಜಾಲತಾಣಕ್ಕಿಂತ ಸಮಾಜ ಮುಖ್ಯ: ಸತ್ಯಂಪೇಟೆ

**ಕಲಬುರಗಿ :** ಯಾವುದೋ ಭ್ರಮಾಲೋಕದಲ್ಲಿ ಮುಳುಗಿ ಗೊಂದಲದ ಗೂಡಾಗಿರುವ ಇಂದಿನ ಯುವಕರು ಸಂವಿಧಾದ ರಕ್ಷಣೆಗೆ ಮುಂದಾಗಬೇಕು ಎಂದು ಪತ್ರಕರ್ತ–ಲೇಖಕ ಡಾ.ಶಿವರಂಜನ ಸತ್ಯಂಪೇಟೆ ಹೇಳಿದರು.

ನಗರದ ಹೊರ ವಲಯದಲ್ಲಿರುವ ಪಂಚಾಯತ್ ರಾಜ್ ಇಲಾಖೆಯ ಅಬ್ದುಲ್ ನಜೀರ್ ಸಾಬ್ ತರಬೇತಿ ಕೇಂದ್ರದಲ್ಲಿ ಸೋಮವಾರ ಆಯೋಜಿಸಿದ್ದ 4ನೇ ದಿನದ ತರಬೇತಿ ಕಾರ್ಯಕ್ರಮದಲ್ಲಿ ಸಂವಿಧಾನ ಮತ್ತು ಮಾಧ್ಯಮ ವಿಷಯ ಕುರಿತು ಮಾತನಾಡಿದ ಅವರು, ಪ್ರಬಲ ಮಾಧ್ಯಮವಾಗಿ ಬೆಳೆಯುತ್ತಿರುವ ಸಾಮಾಜಿಕ ಜಾಲತಾಣ ನೆಚ್ಚಿಕೊಂಡಿರುವ ಯುವಕರಿಗೆ ಸಮಾಜ ಮುಖ್ಯವಾಗಬೇಕು ಎಂದು ಕರೆ ನೀಡಿದರು.

ಬಸವಣ್ಣನವರು ಕಳಬೇಡ, ಕೊಲಬೇಡ ಎಂಬ ವಚನದ ಮೂಲಕ ಸಾರ್ಥಕ ಬದುಕಿಗೆ ಸಪ್ತ ಸೂತ್ರಗಳನ್ನು ಹೇಳಿದರೆ, ಡಾ. ಬಿ.ಆರ್. ಅಂಬೇಡ್ಕರ್ ಅವರು ಸಂವಿಧಾನದ ಮೂಲಕ ಭಾರತೀಯರ ಬದುಕಿಗೆ ಘನತೆ ತಂದು ಕೊಟ್ಟರು ಎಂದು ಅಭಿಪ್ರಾಯಪಟ್ಟರು.

ಸಂವಿಧಾನದ ರಕ್ಷಣೆಯಲ್ಲಿ ಪ್ರಜಾಪ್ರಭುತ್ವದ ನಾಲ್ಕನೇ ಅಂಗವಾದ ಮಾಧ್ಯಮದ ಮೇಲೆ ಸಾಕಷ್ಟು ಜವಾಬ್ದಾರಿಯಿದ್ದು, ಸಂವಿಧಾನದ ಓದು ಮತ್ತು ಅನುಸರಣೆ ಬಹಳ ಅಗತ್ಯ ಎಂದು ಅವರು ಪ್ರತಿಪಾದಿಸಿದರು.

ಅಧ್ಯಕ್ಷತೆ ವಹಿಸಿದ್ದ ತರಬೇತಿ ಕೇಂದ್ರದ ಹಿರಿಯ ಕಾರ್ಯಕ್ರಮಾಧಿಕಾರಿ ನಾಗೇಶ ಹರಳಯ್ಯ ಮಾತನಾಡಿ, ಸಂವಿಧಾನವನ್ನು ಕೇವಲ ಶಾಸನವನ್ನಾಗಿ ನೋಡದೆ, ಸಂವಿಧಾನವನ್ನು ಮೌಲ್ಯವಾಗಿ ನೋಡಬೇಕು ಎಂಬ ದಿಸೆಯಲ್ಲಿ ಶಿಕ್ಷಣ ಮತ್ತು ಸಂವಿಧಾನ, ಸಂವಿಧಾನಮತ್ತುಲಿಂಗಸಮಾನತೆ, ಸಂವಿಧಾನ ಮತ್ತು ಮಾಧ್ಯಮ ಎಂಬಿತ್ಯಾದಿ ವಿಷಯಗಳ ಮೂಲಕ ಯುವಕರಲ್ಲಿ ಜಾಗ್ರತೆ ಮೂಡಿಸಲಾಗುತ್ತಿದೆ ಎಂದರು.

ತರಬೇತಿ ಕೇಂದ್ರದ ಸಿಬ್ಬಂದಿ ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

# ಗುರುವಂದನೆ ಹಾಗೂ ಸ್ನೇಹಿತರ ಸಮ್ಮಿಲನ

**ಮಹಾಲಿಂಗಪುರ :** ಗುರುವಿನ ಸ್ಥಾನ ನೀಡಿ ಗೌರವ ಹೆಚ್ಚಿಸಿದ ಶಿಷ್ಯರ ಗುರುಭಕ್ತಿಗೆ ಶರಣಾಗುವೆವುಎಂದುಸ್ಥಳೀಯಎಸ್.ಸಿ.ಪಿ. ಪ್ರೌಢಶಾಲೆಯ ಉಪಪ್ರಾಂಶುಪಾಲ ಬಿ. ಎನ್. ಅರಕೇರಿ ಹೇಳಿದರು.

ಇಲ್ಲಿನ ಎಸ್.ಸಿ.ಪಿ. ಪ್ರೌಢಶಾಲೆಯಲ್ಲಿ 2006–07 ನೇ ಸಾಲಿನಲ್ಲಿ ಎಸ್.ಎಸ್. ಎಲ್.ಸಿ.ಪಾಸಾದ ವಿದ್ಯಾರ್ಥಿಗಳು ಇತ್ತೀಚೆಗೆ ಹಮ್ಮಿಕೊಂಡಿದ್ದ ಗುರುವಂದನೆ ಹಾಗೂ ಸ್ನೇಹಿತರ ಸಮ್ಮಿಲನ ಕಾರ್ಯಕ್ರಮದಲ್ಲಿ ಮಾತನಾಡಿದರು.

ಕಲಿತ ಶಾಲೆ ಮತ್ತು ಕಲಿಸಿದ ಗುರುಗಳನ್ನು ಹದಿನೆಂಟು ವರ್ಷಗಳ ನಂತರ ನೆನೆದು ಎಲ್ಲರನ್ನೂ ಸನ್ಮಾನಿಸುವ ಗುರುಭಕ್ತಿ ಶ್ಲಾಘನೀಯ ಎಂದರು.

ಇದಕ್ಕೂ ಮುನ್ನ ವಿದ್ಯಾರ್ಥಿಗಳು ನೆಲಕ್ಕೆ ಹೂವು ಹಾಸಿ ಇಕ್ಕೆಲಗಳಲ್ಲಿ ನಿಂತು ಎಲ್ಲ ಗುರುಗಳ ತಲೆ ಮೇಲೆ ಹೂಮಳೆಗರೆದು ವೇದಿಕೆಗೆ ಬರ ಮಾಡಿಕೊಂಡರು. ಹೂಗುಚ್ಛ ನೀಡಿ ಗೌರವಿಸಿದರು.

ಕಾರ್ಯಕ್ರಮ ಆರಂಭಕ್ಕೂ ಮುನ್ನ ತಮ್ಮನ್ನು ಅಗಲಿದ ಶಿಕ್ಷಕರಾದ ಎಸ್. ಜಿ. ಜೀವಣಿ, ಸಿ. ಎಸ್. ಕೊಣ್ಣೂರ ಹಾಗೂ ಸಹಪಾಠಿಗಳಾದ



ಶಿವಲೀಲಾ ಶಿರೋಳ, ಮಹಾಲಿಂಗ ಮಠಪತಿ ಅವರಿಗೆ ಮೌನ ಶ್ರದ್ಧಾಂಜಲಿ ಸಲ್ಲಿಸಲಾಯಿತು.

ಸವಿತಾ ಕಂಬಾರ, ಮಾಲಾಶ್ರೀ ಉಪ್ಪಾರ ಪ್ರಾರ್ಥನೆ ಹಾಡಿದರು. ಪೂಜಾ ಶಿರೋಳ, ಅಶ್ವಿನಿ ಹುಡೇದಮನಿ ಸ್ವಾಗತ ಗೀತೆ ಹಾಡಿದರು. ಅಕ್ಷತಾ ಮುಧೋಳ ಪುಷ್ಪಾರ್ಪಣೆ ಮಾಡಿದರು. ಸ್ಥಾನಿಕ ಆಡಳಿತ ಮಂಡಳಿ ಸದಸ್ಯ ಅಶೋಕ ಅಂಗಡಿ ಕಾರ್ಯಕ್ರಮ ಉದ್ಘಾಟಿಸಿದರು. ಪೂಜಾ ಶಿರೋಳ, ಚೇತನ ಡೋಣಿ, ಪ್ರವೀಣ ಹೊಸಕೋಟಿ ತಮ್ಮ ಅನಿಸಿಕೆ ವ್ಯಕ್ತಪಡಿಸಿದರು. ಗುರುಗಳಾದ ಎಸ್.ಬಿ. ಹುಲಕುಂದ, ಎಸ್. ಬಿ.ಕೋರಿಶೆಟ್ಟಿ, ಎಂ. ಐ. ಡಾಂಗೆ, ಬಿ. ಡಿ. ಗೋಕಾಕ, ಬಿ. ಎನ್. ಅರಕೇರಿ, ಆರ್. ಎಸ್. ಯರಗಾಣಿ, ಎಸ್. ಎಸ್. ಅನಿಗೋಳ, ಸಿ. ಎ. ಫಡತಾರೆ ಅವರನ್ನು ವಿದ್ಯಾರ್ಥಿಗಳು ಸನ್ಮಾನಿಸಿದರು.

ಗುರು–ಶಿಷ್ಯರು ಪರಸ್ಪರ ಗತಕಾಲದ ನೆನಪು ಮತ್ತು ಅನುಭವಗಳನ್ನು ಮೆಲಕು ಹಾಕಿದರು. ವಿದ್ಯಾರ್ಥಿಗಳು ಪ್ರತಿಯೊಬ್ಬ ಶಿಕ್ಷಕರಿಗೂ ಒಂದೊಂದು ಸಸಿ ನೀಡಿ ಅದು ಹಚ್ಚಹಸಿರಾಗಿರುವಂತೆ ಮತ್ತು ತಮ್ಮ ನೆನಪು ಕೂಡ ಹಸಿರಾಗಿರುವಂತೆ ಮನವಿ ಮಾಡಿದರು. ಎಲ್ಲ ಗುರುಶಿಷ್ಯರೊಂದಾಗಿ ಗ್ರುಫ್ ಫೋಟೋ ಮತ್ತು ಸೆಲ್ಫೀ ಫೋಟೋ ತೆಗೆಸಿಕೊಂಡು ಸಂಭ್ರಮಿಸಿದರು.

ಪ್ರವೀಣ ಸೋನಾರ, ವನಜಾ ಶಿವಣಗಿ, ಗೋಪಿನಾಥ ರೇಣಕೆ, ಅಕ್ಷತಾ ಮುಧೋಳ, ಶಿವು ಅಂಬಿ, ಪೂಜಾ ಶಿರೋಳ, ಮಾಲಾಶ್ರೀ ಉಪ್ಪಾರ, ಪ್ರವೀಣ ಹೊಸಕೋಟಿ ಸೇರಿದಂತೆ ಹಲವಾರು ಸಹಪಾಠಿಗಳು ಕಾರ್ಯಕ್ರಮ ಸಂಘಟಿಸಿದ್ದರು.

# ಗ್ರಾಮ ಪಂಚಾಯತ ಸದಸ್ಯನ ಮೇಲೆ ಹಲ್ಲೆ: ಕೆರೂರ ಪೊಲೀಸರ ವಿರುದ್ಧ ಕ್ರಮಕ್ಕೆ ಆಗ್ರಹ



**ಬಾಗಲಕೋಟೆ :** ಬಾದಾಮಿ ತಾಲೂಕು ಬೆಳ್ಳಿಖಂಡಿ ಗ್ರಾಮದ ಗ್ರಾಮ ಪಂಚಾಯತ್ ಸದಸ್ಯ ಭೀಮಪ್ಪ ತಿಪ್ಪಣ್ಣ ಮೇಟಿ ಮೇಲೆ ಕೆರೂರ ಠಾಣೆಯ ಪೊಲೀಸರು ಹಲ್ಲೆ ನಡೆಸಿದ ಆರೋಪ ಎದುರಾಗಿದೆ. ಈ ಘಟನೆಗೆ ಸಂಬಂಧಿಸಿ ಕೆರೂರ ಪೊಲೀಸರ ವಿರುದ್ಧ ಕ್ರಮ ಕೈಗೊಳ್ಳಬೇಕು ಎಂದು ಆಲ್ ಇಂಡಿಯಾ ಬಹುಜನ ಸಮಾಜ ಪಕ್ಷದ ರಾಜ್ಯ ಉಪಾಧ್ಯಕ್ಷ ವೈ.ಸಿ. ಕಾಂಬಳೆ ಆಗ್ರಹಿಸಿದ್ದಾರೆ.

ಬುಧವಾರ ನಗರದಲ್ಲಿ ಸುದ್ದಿಗೋಷ್ಠಿ ನಡೆಸಿದ ಅವರು, "ಬೆಳ್ಳಿಖಂಡಿ ಗ್ರಾಮದಲ್ಲಿ ವಿವಾದಿತ ಜಾಗೆಯ ವಿಚಾರದಲ್ಲಿ ರಾಜಿ ಸಂಧಾನಕ್ಕಾಗಿ ಭೀಮಪ್ಪ ಮೇಟಿ ಅವರನ್ನು ಪೊಲೀಸ್ ಠಾಣೆಗೆ ಕರೆಯಲಾಗಿತ್ತು. ಆದರೆ, ಪ್ರಶ್ನೆ–ಪ್ರಶ್ನೆಗಳ ನಡುವೆಯೇ ಅನಗತ್ಯವಾಗಿ ಪೊಲೀಸರಿಂದ ಹಲ್ಲೆ ನಡೆಸಲಾಗಿದೆ. ಇದು ಗಂಭೀರವಾದ ವಿಚಾರವಾಗಿದ್ದು, ಕೂಡಲೇ ಈ ಕುರಿತಾಗಿಪೊಲೀಸರುಎಫ್‌ಐಆರ್‌ದಾಖಲಿಸಬೇಕು" ಎಂದು ಒತ್ತಾಯಿಸಿದರು.

ಈ ಕುರಿತು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಿಗೆ ಈಗಾಗಲೇ ಮಾಹಿತಿಯನ್ನೂ ನೀಡಲಾಗಿದೆ. ಆದರೆ ಇದುವರೆಗೂ ಯಾವುದೇ ದೂರು ದಾಖಲಾಗಿ ತನಿಖೆ ಪ್ರಾರಂಭವಾಗಿಲ್ಲ. ನ್ಯಾಯ ಒದಗಿಸದಿದ್ದರೆ ಬಿಎಸ್ಪಿ ಪಕ್ಷ ಮುಂದಿನದಿನಗಳಲ್ಲಿಪ್ರತಿಭಟನೆಆರಂಭಿಸುತ್ತದೆಎಂದು ಅವರು ಎಚ್ಚರಿಕೆ ನೀಡಿದರು. ಈ ವೇಳೆ ಹಲ್ಲೆಗೊಳಗಾದ ಭೀಮಪ್ಪ ಮೇಟಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿ, "ನಾನು ಸಾರ್ವಜನಿಕ ಪ್ರತಿನಿಧಿಯಾಗಿದ್ದು, ನನ್ನ ಮೇಲೆ ಹಲ್ಲೆ ಮಾಡಿದರೂ ಯಾವುದೇ ಪೊಲೀಸ್ ಇಲಾಖೆ ಕ್ರಮ ತೆಗೆದುಕೊಳ್ಳದೇ ನಿರ್ಲಕ್ಷ್ಯ ತೋರಿದೆ. ನನಗೆ ನ್ಯಾಯ ಸಿಗಬೇಕು," ಎಂದು ಬೇಡಿಕೆ ಇಟ್ಟರು.

ಸುದ್ದಿಗೋಷ್ಠಿಯಲ್ಲಿ ಬಿಎಸ್ಪಿ ಮುಖಂಡರಾದ ಅಶೋಕ ರಾಜಾಪೂರ, ಗುರುಶಾಂತಪ್ಪ ಮದಿನಕರ, ದುಸಂಗಪ್ಪ ಮುರನಾಳ, ಶಂಕರ ಚಂದಾವರಿ ಮತ್ತಿತರರು ಉಪಸ್ಥಿತರಿದ್ದರು.

# ಮುಂಗಾರು ಹಂಗಾಮಿಗಾಗಿ ಭರದಿಂದ ಸಿದ್ಧತೆ







–ಕಿರಣ ಶ್ರೀಶೈಲ ಆಳಗಿ.

**ರಬಕವಿ–ಬನಹಟ್ಟಿ :** ಮುಂಗಾರು ಪೂರ್ವ ಮಳೆ ಪ್ರಾರಂಭವಾಗಿದ್ದು, ರೈತರು ಮುಂಗಾರು ಹಂಗಾಮಿಗಾಗಿ ಸಿದ್ಧತೆ ನಡೆಸಿದ್ದಾರೆ. ಈ ಬಾರಿ ಬಿಸಿಲಿನ ತಾಪದಿಂದ ಭೂಮಿ ತಾಪಮಾನ ಹೆಚ್ಚಾಗಿತ್ತು. ಇದೀಗ ಕೆಲವು ದಿನಗಳಿಂದ ಸುರಿಯುತ್ತಿರುವ ಮಳೆ ತಂಪೆರೆದಿದ್ದು, ಮುಂಬರುವ ಮಳೆಯನ್ನು ನಂಬಿರಬಕವಿ–ಬನಹಟ್ಟಿತಾಲೂಕಿನಾದ್ಯಂತ ರೈತರು ಮುಂಗಾರು ಬಿತ್ತನೆಗೆ ಭರದಿಂದ ಸಿದ್ಧತೆ ಮಾಡಿಕೊಳ್ಳುತ್ತಿದ್ದು, ಭೂಮಿ ಹದಗೊಳಿಸುವ ಜೊತೆಗೆ ಕೃಷಿ ಪರಿಕರಗಳ ದುರಸ್ತಿ ಹಾಗೂ ಸ್ವಚ್ಛತೆಯಲ್ಲಿ ನಿರತರಾಗಿದ್ದಾರೆ.

ಈ ಬಾರಿ ಪೂರ್ವಭಾವಿಯಾಗಿ ಉತ್ತಮ ಮಳೆಯಾಗಿದ್ದು, ರೈತರು ಬಿತ್ತನೆಗೆ ಬೇಕಾದ ಕುಂಟೆ, ಪಲಗಾ, ಕೂರಿಗೆ, ನೊಗ,

> **ರೈತರು ಸದ್ಯ ರೋಹಿಣಿ ಮಳೆಯ ನಿರೀಕ್ಷೆಯಲ್ಲಿದ್ದು ಮಳೆ ಸಮೃದ್ಧಿಯಾಗಿ ಬಂದರೆ ರೈತನ ಬದುಕು ಬಂಗಾರವಾಗುವುದರಲ್ಲಿ ಎರಡು ಮಾತಿಲ್ಲ.**
> । ಧರೆಪ್ಪ ಕಿತ್ತೂರ
> **ಸಾವಯವ ಕೃಷಿಕರು, ತೇರದಾಳ.**

ಬುಕ್ಕಾ ಸಿದ್ಧತೆಗೊಳಿಸುವ ಕಾರ್ಯದಲ್ಲಿ ನಿರತರಾಗಿದ್ದಾರೆ.

ಮುಂಬರುವ ಮಳೆಯನ್ನು ನಂಬಿ ಈ ಭಾಗದ ರೈತರು ಮುಂಗಾರು ಪೂರ್ವ ಬಿತ್ತನೆ ಚಟುವಟಿಕೆಗಳನ್ನು ಭರದಿಂದ ನಡೆಸಿದ್ದಾರೆ. ಈ ಭಾಗದಲ್ಲಿ ಮುಂಗಾರಿನ ನಿರೀಕ್ಷೆಯನ್ನಿಟ್ಟುಕೊಂಡು ಮುಂಗಾರು ಬೆಳೆಗಳಾದ ದ್ವಿದಳ ದಾನ್ಯಗಳಾದ ಸೋಯಾಬೀನ್, ಬೇಳೆ, ಉದ್ದು, ಹೆಸರು, ಮಡಿಕೆಕಾಳು ಸೇರಿದಂತೆ ವಿವಿಧ ಬೆಳೆಗಳ ಜೊತೆ ವಾಣಿಜ್ಯ ಬೆಳೆಗಳಾದ ಕಬ್ಬು ಹಾಗೂ ಅರಿಷಿಣ ಬಿತ್ತನೆ ಮಾಡಲು ರೈತರು ತಮ್ಮ

> **ತಾಲೂಕಿನಲ್ಲಿ ಕಳೆದೆರಡು ದಿನಗಳಲ್ಲಿ ಉತ್ತಮ ಮಳೆಯಾಗಿದ್ದು, ರೈತರು ಕೃಷಿ ಚಟುವಟಿಕೆ ಮಾಡಲು ಸಿದ್ಧತೆ ಮಾಡಿಕೊಳ್ಳುತ್ತಿದ್ದಾರೆ. ತಾಲೂಕಿನ ಎಲ್ಲ ಬೀಜ ವಿತರಣಾ ಕೇಂದ್ರದಲ್ಲಿ ಬೀಜ ವಿತರಣೆಗೆ ನಾವು ಬೀಜಗಳನ್ನು ಸಂಗ್ರಹ ಮಾಡಿಕೊಂಡಿದ್ದು, ಸಕಲ ಸಿದ್ಧತೆಗಳನ್ನು ಮಾಡಿಕೊಳ್ಳಲಾಗಿದೆ. ಮೇ ತಿಂಗಳ 24 ಅಥವಾ 25 ರಂದು ಬೀಜ ವಿತರಣೆ ಮಾಡಲಾಗುವುದು.**
> । ಸಿದ್ದಪ್ಪ ಪಟ್ಟಿಹಾಳ, **ಸಹಾಯಕ ಕೃಷಿ ನಿರ್ದೇಶಕರು, ಜಮಖಂಡಿ.**

ಚಟುವಟಿಕೆಗಳನ್ನು ಪ್ರಾರಂಭಿಸಿದ್ದಾರೆ.

ಬಿತ್ತನೆಗುರಿ:ರಬಕವಿ–ಬನಹಟ್ಟಿತಾಲೂಕಿನಲ್ಲಿ ಈ ಬಾರಿ ಮುಂಗಾರು ಹಂಗಾಮಿಗೆ ಗೋವಿನ ಜೋಳ 8,900 ಹೆಕ್ಟೇರ್ ಪ್ರದೇಶ, ತೊಗರಿ 1,000 ಹೆಕ್ಟೇರ್ ಪ್ರದೇಶ, ಹುರುಳಿ 10 ಹೆಕ್ಟೇರ್, ಹೆಸರು 800 ಹೆಕ್ಟೇರ್, ಉದ್ದು 300 ಹೆಕ್ಟೇರ್, ಅವರೆ 20 ಹೆಕ್ಟೇರ್, ಶೇಂಗಾ 100 ಹೆಕ್ಟೇರ್, ಸೂರ್ಯಕಾಂತಿ 500 ಹೆಕ್ಟೇರ್, ಸೋಯಾಬೀನ್ 200 ಹೆಕ್ಟೇರ್, ಕಬ್ಬು ಪಿ. 3,750 ಹೆಕ್ಟೇರ್, ಕಬ್ಬು ಹೆಚ್. 12,500 ಹೆಕ್ಟೇರ್ ಪ್ರದೇಶದಲ್ಲಿ ಮುಂಗಾರು ಬಿತ್ತನೆಯ ಗುರಿ ಹೊಂದಲಾಗಿದೆ.

**ಸಲಕರಣೆ ಬಾಡಿಗೆ:**

ಭೂಮಿ ಉಳುಮೆಗೆ ಟ್ರ್ಯಾಕ್ಟರ್ ಹಾಗೂ ಎತ್ತುಗಳಿಗೆ ಭಾರಿ ಬೇಡಿಕೆ ಬಂದಿದೆ. ಟ್ರ್ಯಾಕ್ಟರ್ ಉಳುಮೆ ಮಾಡಲು ಎಕರೆಗೆ 3,500 ರೂ. ಹಾಗೂ ಎತ್ತುಗಳ ಉಳುಮೆಗೆ ಒಂದು ಎಕರೆಗೆ 3 ಸಾವಿರ ರೂ.ಗಳಷ್ಟು ಬೇಡಿಕೆ ಇದೆ. ಒಂದು ಎಕರೆ ನೆಲ ರೆಡಿ ಮಾಡಲು ಸುಮಾರು 9 ರಿಂದ 10 ಸಾವಿರ ರೂ. ವರೆಗೆ ಬಾಡಿಗೆ ಆಗುತ್ತದೆ ಎನ್ನುತ್ತಾರೆ ಜಗದಾಳದ ಸಾವಯವ ಕೃಷಿಕರಾದ ಸದಾಶಿವ ಬಂಗಿ.

# ಹೊಸ ಅಧ್ಯಕ್ಷ, ಹೊಸ ದಿಕ್ಕು: ಕರವೇ ಹೋರಾಟಕ್ಕೆ ಭೋವಿ ಮುನ್ನಡೆ



**ಬಾಗಲಕೋಟೆ :** ಕರ್ನಾಟಕ ರಕ್ಷಣಾ ವೇದಿಕೆ (ನಾರಾಯಣಗೌಡ ಬಣ) ಬಾಗಲಕೋಟೆ ಜಿಲ್ಲಾ ಘಟಕದ ನೂತನ ಅಧ್ಯಕ್ಷರಾಗಿ ಗಣಪತಿ ಭೋವಿ ಅವರನ್ನು ನೇಮಕ ಮಾಡಲಾಗಿದೆ. ಈ ಕುರಿತು ಅಧಿಕೃತ ಆದೇಶ ಹೊರಡಿಸಲಾಗಿದೆ ಎಂದು ಅವರು ಪತ್ರಿಕಾಗೋಷ್ಠಿಯಲ್ಲಿ ತಿಳಿಸಿದ್ದಾರೆ. ನಗರದ ಪತ್ರಿಕಾ ಭವನದಲ್ಲಿ ಗುರುವಾರ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಭೋವಿ, "ಜಿಲ್ಲೆಯ ಜನಜೀವನವನ್ನು ಪ್ರಭಾವಿಸುವ ಹಲವು ಸಮಸ್ಯೆಗಳ ಬಗ್ಗೆ ಧ್ವನಿ ಎತ್ತುವ ಹಾಗೂ ಕರವೇ ಹೋರಾಟಕ್ಕೆ ಮುನ್ನಡೆ ನೀಡುವ ಹೊಣೆಗಾರಿಕೆಯನ್ನು ನನ್ನ ಮೆಲೆಗೆ ನೀಡಿದ್ದಾರೆ. ಇದು ಗೌರವದ ವಿಷಯವೇನು ಆಗಿರಲಿ, ದೊಡ್ಡ ಜವಾಬ್ದಾರಿಯೂ ಹೌದು," ಎಂದರು. ವೈದ್ಯಕೀಯ ಕಾಲೇಜು ಸ್ಥಾಪನೆಯ ಅವಶ್ಯಕತೆ, ವಿದ್ಯಾರ್ಥಿಗಳಿಗೆ ಮೂಲಭೂತ ಸೌಲಭ್ಯ, ರೈತರಿಗೆ ನ್ಯಾಯಯುತ ಬೆಂಬಲ ಬೆಲೆ, ನಿರುದ್ಯೋಗಿ ಯುವಕರಿಗೆ ಉದ್ಯೋಗ ಸೃಷ್ಟಿ ಮೊದಲಾದ ವಿಷಯಗಳ ಕುರಿತು ನಿರಂತರ ಹೋರಾಟವನ್ನು ನಾವು ಮುಂದುವರಿಸುವೆವು, ಎಂದು ಭರವಸೆ ನೀಡಿದರು. ಪಕ್ಷ, ಧರ್ಮ, ಜಾತಿ ವಿರುದ್ಧವಾಗದ ರೀತಿಯಲ್ಲಿ ಸಾರ್ವಜನಿಕ ಹಿತದ ದೃಷ್ಟಿಯಿಂದ ಹೋರಾಟ ನಡೆಸುವ ದಿಟ್ಟ ಸಂಕಲ್ಪ ಹೊಂದಿದ್ದೇವೆ ಎಂದು ತಿಳಿಸಿದ ಅವರು, "ನಾನು ನಿರ್ಭಯವಾಗಿ, ನಿಸ್ವಾರ್ಥ ಸೇವೆಯನ್ನು ನೀಡಲು ಬದ್ಧನಾಗಿದ್ದೇನೆ. ಜನರ ಬುದ್ಧಿವಂತ ಬೆಂಬಲವೇ ನಮ್ಮ ಶಕ್ತಿ," ಎಂದರು. ಸುದ್ದಿಗೋಷ್ಠಿಯಲ್ಲಿ ಜಿಲ್ಲಾಧ್ಯಕ್ಷರೊಂದಿಗೆ ಉಪಾಧ್ಯಕ್ಷ ರಂಜಾನ್ ನದಾಫ್, ಮಲ್ಲು ಕಟ್ಟಿಮನಿ, ಪ್ರಧಾನ ಕಾರ್ಯದರ್ಶಿ ಸಂಗಮೇಶ ಅಂಬಿಗೇರ, ಸಹ ಕಾರ್ಯದರ್ಶಿ ವೀರಣ್ಣ ಬಡಿಗೇರ ಹಾಗೂ ಜಿಲ್ಲಾ ಸಂಚಾಲಕ ರಾಮಜಿ ಘೋರ್ಪಡೆ ಉಪಸ್ಥಿತರಿದ್ದರು.

# ಉದ್ಯೋಗ ಖಾತರಿ ಯೋಜನೆಯ ಸಾಫಲ್ಯತೆ: ಕೆರೆಯ ಒಡಲು ಭರ್ತಿ

**ವಿಜಯಪುರ :** ಜಿಲ್ಲೆಯ 13 ತಾಲೂಕಿನ ಎಲ್ಲಾ ಗ್ರಾಮಪಂಚಾಯತಿಗಳಲ್ಲಿಜನರಿಗೆಬೇಸಿಗೆಯಲ್ಲಿ ಮಹಾತ್ಮ ಗಾಂಧಿ ನರೇಗಾ ಯೋಜನೆಯ ದುಡಿಯೋಣ ಬಾ ಅಭಿಯಾನದಡಿ ಸತತ ಉದ್ಯೋಗ ಕಲ್ಪಿಸಲಾಗುತ್ತಿದೆ. ಏಪ್ರಿಲ್ ಹಾಗೂ ಮೇ ತಿಂಗಳಲ್ಲಿ 2,94,323 ಮಾನವ ದಿನಗಳನ್ನು ಸೃಜನೆ ಮಾಡಿ ಅಂತರ್ಜಲ ಅಭಿವೃದ್ಧಿಗಾಗಿ ಮಣ್ಣು ಮತ್ತು ನೀರು ಸಂರಕ್ಷಣಾ ಕಾಮಗಾರಿಗಳನ್ನು ಅನುಷ್ಠಾನ ಮಾಡಲಾಗಿದೆ.

ಕಳೆದ ಎರಡು ದಿನಗಳಿಂದ ಜಿಲ್ಲೆಯಲ್ಲಿ ಉತ್ತಮ ಮಳೆಯಾಗಿದ್ದರಿಂದ ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆಯಡಿ ಕೆರೆಗಳ ಹೂಳೆತ್ತುವ ಹಾಗೂ ಅರಣ್ಯೀಕರಣಕ್ಕೆ ಮುಂಗಡ ಗುಂಡಿಗಳು, ಕೃಷಿಹೊಂಡ, ಬದು ನಿರ್ಮಾಣ, ನಾಲಾ-ಹಳ್ಳಗಳಲ್ಲಿ ಮಳೆ ನೀರು ಶೇಖರಣೆ ಆಗಿದೆ. ಮುಂಬರುವ ದಿನಗಳಲ್ಲಿ ವಿವಿಧೆಡೆ ಬಾವಿ ಹಾಗೂ ಬೋರ್ವೆಲ್‌ಗಳಲ್ಲಿ ಅಂತರ್ಜಲ ಮಟ್ಟ ವೃದ್ಧಿಯಾಗಿ ಆ ಭಾಗದ ರೈತರ ಮೊಗದಲ್ಲಿ ಸಂತಸ ತರಿಸಿದೆ.

ಕಳೆದ ದಿನಗಳಲ್ಲಿ ಭೀಕರ ಬರ ನೆನಪಿಸುವಂಥ ದಿನಗಳನ್ನು ಕಂಡಿದ್ದ ವಿಜಯಪುರ ಜಿಲ್ಲೆಯಲ್ಲಿ ವಾಡಿಕೆ ಮಳೆ ಪ್ರಮಾಣ ಕಡಿಮೆ ಇದ್ದ ಹಿನ್ನೆಲೆಯಲ್ಲಿ ಕೆರೆಗಳು, ಬಾವಿಗಳು, ಬೋರ್ವೆಲ್‌ಗಳು ನೀರಿನ ಒರತೆ ಕಡಿಮೆ ಇತ್ತು. ಸ್ವಾಭಾವಿಕ ಸಂಪನ್ಮೂಲಗಳಲ್ಲಿ ಒಂದಾದ ನೀರು ಮನುಷ್ಯ ಸೇರಿದಂತೆ ಸಕಲ ಜೀವರಾಶಿಗಳಿಗೂ ಅತ್ಯವಶ್ಯಕ. ಜಲವೇ ಜೀವನ ಎಂಬಂತೆ ನೀರಿನ ಬಳಕೆ ಮತ್ತು ಉಳಿತಾಯದಲ್ಲಿ ಬಹುದೊಡ್ಡ ಜವಾಬ್ದಾರಿಯನ್ನು ನಿಭಾಯಿಸಬೇಕಾಗಿದೆ. ಮಳೆ ಆಶ್ರಿತ ಕೃಷಿ ಚಟುವಟಿಕೆಗೆ ನೀರು ಸಂಗ್ರಹಣೆಯು ಪ್ರಮುಖ ಪಾತ್ರವಹಿಸುತ್ತದೆ. ಮಳೆಗಾಲದ ಸಂದರ್ಭದಲ್ಲಿ ಮಳೆ ನೀರು ಹಿಡಿದಿಟ್ಟುಕೊಳ್ಳುವುದು ಅಗತ್ಯವಾಗಿದೆ.

ಮಹಾತ್ಮಗಾಂಧಿ ನರೇಗಾ ಯೋಜನೆಯಡಿ ಕೆರೆಗಳ ಹೂಳೆತ್ತುವ ಹಾಗೂ ಅರಣ್ಯೀಕರಣಕ್ಕೆ ಮುಂಗಡ ಗುಂಡಿಗಳು, ಕೃಷಿಹೊಂಡ, ಬದು ನಿರ್ಮಾಣ, ನಾಲಾ-ಹಳ್ಳಗಳ ಅಭಿವೃದ್ಧಿಪಡಿಸುವ ಮಹತ್ತರ ಕಾರ್ಯ ಕೈಗೊಳ್ಳಲಾಗಿದೆ. ಈ ಕಾಮಗಾರಿಗಳನ್ನು ಅಭಿವೃದ್ಧಿಪಡಿಸುವ ಮೂಲಕ ಅಂತರ್ಜಲ ಮಟ್ಟ ಹೆಚ್ಚಿಸುವ ಸ್ವಾಗತಾರ್ಹ ಕೆಲಸ ಮಾಡಲಾಗಿದೆ.

ಮಹಾತ್ಮ ಗಾಂಧಿ ನರೇಗಾ ಯೋಜನೆಯಡಿ ದುಡಿಯುವ ಕೈಗಳಿಗೆ ಉದ್ಯೋಗ ಖಾತರಿ ಯೋಜನೆ ಕೈ ಹಿಡಿದಿರುವುದು ಒಂದೆಡೆಯಾದರೆ, ಹೂಳೆತ್ತಿದ ಕೆರೆಯಲ್ಲಿ ನೀರು ನಿಂತಿರುವುದು ಸಾರ್ಥಕತೆ ಮೂಡಿಸಿದೆ. ಹೂಳು ತುಂಬಿ ಹೆಚ್ಚು ನೀರು ನಿಲ್ಲದೇ ಇರುವ ಕೆರೆಗಳನ್ನು ಆಯ್ಕೆ ಮಾಡಿಕೊಂಡು ಕೂಲಿ ಕಾರ್ಮಿಕರಿಗೆ ಕೆಲಸ ನೀಡಿ, ಇತ್ತೀಚೆಗೆ ಸುರಿದ ಮಳೆಯಿಂದಾಗಿ ಕೆರೆಗಳಲ್ಲಿ ಮಳೆನೀರು ಸಂಗ್ರಹವಾಗುವಂತೆ ಮಾಡಲಾಗಿದೆ.



ಕೆರೆಗಳು ಹಾಗೂ ಜಲಮೂಲಗಳು ಒಣಗಿದ್ದರಿಂದ ಸುತ್ತಮುತ್ತಲಿನ ದ್ರಾಕ್ಷಿ ಸೇರಿ ಇತರೆ ತೋಟಗಾರಿಕೆ ಬೆಳೆಗಳಿಗೆ ನೀರಿಲ್ಲದೇ ಒಣಗುತ್ತಿದ್ದವು. ಆದರೆ ಈಗ ಕೆರೆಗಳು ಭರ್ತಿಯಾಗಿದ್ದರಿಂದ ಸುತ್ತಮುತ್ತಲಿನ ಬಾವಿಗಳು, ಕೊಳವೆ ಬಾವಿಗಳು ಮರುಪೂರಣ ಆಗಿದ್ದು, ರೈತರ ಆತಂಕ ದೂರವಾಗಿದೆ. ಕೆರೆಗಳಲ್ಲಿ ನೀರು ನಿಂತಿದೆ. ಮಹಾತ್ಮ ಗಾಂಧಿ ನರೇಗಾ ಹೂಳೆತ್ತಿದ್ದರಿಂದ ಆಳ ಹೆಚ್ಚಾಗಿದ್ದು, ನೀರು ಸಂಗ್ರಹಣೆ ಪ್ರಮಾಣವೂ ಹೆಚ್ಚಾಗಿ ಕೆರೆಯ ಸುತ್ತಮುತ್ತಲು ಬತ್ತಿ ಹೋಗಿದ್ದ ಬೋರ್ವೆಲ್‌ಗಳು, ಬಾವಿಗಳಿಗೆ ನೀರು ಹೆಚ್ಚುವ ಸಾಧ್ಯತೆ ಇದೆ. ಇದರಿಂದ ತೋಟಗಾರಿಕೆ ರೈತರಿಗೆ ನೀರಿನ ಕೊರತೆ ನೀಗುತ್ತದೆ. ಗಿಡ ಮರಗಳಿಗೆ ನೀರು ಸಿಕ್ಕು, ನೀರಿಲ್ಲದೇ ಒಣಗುತ್ತಿದ್ದ ಮರಗಳಿಗೂ ಸಹ ನೀರು ಲಭಿಸಿ ಜೀವ ಬಂದಂತಾಗಿದೆ ಹಾಗೂ ಜನಜಾನುವಾರುಗಳಿಗೆ ಜೀವ ಜಲ ಸಿಕ್ಕಿದೆ. ದುಡಿಯುವ ಕೈಗಳಿಗೆ ಕೆಲಸವೂ ಲಭಿಸಿದೆ.

**ಫಲಶೃತಿ:** ಮಹಾತ್ಮಗಾಂಧಿ ನರೇಗಾ ಯೋಜನೆಯಡಿ ಕೆರೆಗಳ ಹೂಳೆತ್ತುವ ಹಾಗೂ ಅರಣ್ಯೀಕರಣಕ್ಕೆ ಮುಂಗಡ ಗುಂಡಿಗಳು, ಕೃಷಿಹೊಂಡ, ಬದು ನಿರ್ಮಾಣ, ನಾಲಾ, ಹಳ್ಳಗಳನ್ನು ಪರಿಣಾಮಕಾರಿಯಾಗಿ ಅನುಷ್ಠಾನ ಮಾಡಿದ್ದರಿಂದ ಎಲ್ಲರ ಮೆಚ್ಚುಗೆಗೆ ಪಾತ್ರವಾಗಿದೆ. ಜಿಲ್ಲೆಯಲ್ಲಿ ಇದೀಗ ಆರಂಭವಾಗಿರುವ ವರ್ಷಧಾರೆಯಿಂದಾಗಿ ಕೆರೆಗಳು ಬಹುತೇಕ ಮೈದುಂಬಿ ಕಂಗೊಳಿಸುತ್ತಿವೆ. ಗ್ರಾಮಗಳ ಜನ-ಜಾನುವಾರುಗಳಿಗೆ ಆಸರೆಯಾಗಿವೆ. ಸುತ್ತ-ಮುತ್ತಲಿನ ಜಮೀನುಗಳಿಗೆ ಮತ್ತು ಬೋರ್ವೆಲ್‌ಗಳಿಗೆ ಅಂತರ್ಜಲ ಮಟ್ಟ ಹೆಚ್ಚಾಗಲು ಆರಂಭಿಕ ಹೆಜ್ಜೆ ಇಟ್ಟಿದೆ. ಕೆರೆಯ ಅಂಚಿನ ಪ್ರದೇಶದ ರೈತರಿಗೆ ಸಹಕಾರಿಯಾಗಿದೆ. ಮೂಕ ಪ್ರಾಣಿ, ಪಕ್ಷಿ ಹಾಗೂ ಜಾನುವಾರುಗಳಿಗೆ ನೀರಿನ ದಾಹ ನೀಗಿಸಿದಂತಾಗಿದೆ, ಸಾರ್ವಜನಿಕರು ಕೃಷಿ ಚಟುವಟಿಕೆಗಳಿಗೆ ಕೆರೆಯ ನೀರನ್ನು ಬಳಸಿಕೊಂಡು ಉತ್ತಮ ಇಳುವರಿ ಮತ್ತು ಅಧಿಕ ಆದಾಯ ಪಡೆಯಲು ಸಹಾಯಕವಾಗುತ್ತದೆ.

ಜಿಲ್ಲೆಯ ನಿಡಗುಂದಿ ತಾಲೂಕಿನ ಹೆಬ್ಬಾಳ ಗ್ರಾಮ ಪಂಚಾಯತಿ ವ್ಯಾಪ್ತಿಯ ಕಿರಿಶ್ಯಾಳ ಕೆರೆಯಲ್ಲಿ ಮಹಾತ್ಮ ಗಾಂಧಿ ನರೇಗಾ ಯೋಜನೆಯಡಿ ಕೆರೆ ಹೂಳು ತೆಗೆಯಲಾಗಿದ್ದು, ತಗ್ಗುಗಳಲ್ಲಿ ಮಳೆ ನೀರು ಸಂಗ್ರಹವಾಗಿದೆ. ಕೆರೆ ಅಂಗಳದಲ್ಲಿ ಸುಮಾರು 3ಅಡಿ ಉದ್ದ, 3 ಅಡಿ ಅಗಲ, 6 ಅಡಿ ಆಳದ ಒಟ್ಟು 171 ತಗ್ಗುಗಳನ್ನು ನಿರ್ಮಿಸಲಾಗಿದೆ. ಪ್ರತಿ ತಗ್ಗು 5400 ಲೀಟರ್ ನೀರು ಸಂಗ್ರಹ ಸಾಮರ್ಥ್ಯ ಹೊಂದಿರುತ್ತದೆ. ಒಟ್ಟು 171 ತಗ್ಗುಗಳಲ್ಲಿ 9,23,400 ಲೀಟರ್ ನೀರು ಸಂಗ್ರಹವಾಗಿದೆ. ಈ ಕೆರೆ ಸುತ್ತಲೂ ಹೆಬ್ಬಾಳ ಗ್ರಾಮದ ವ್ಯಾಪ್ತಿಗೆ ಅಂದಾಜು 100 ಎಕರೆ ಜಮೀನು ಇದ್ದು, 16 ಬೋರ್ವೆಲ್ ಹಾಗೂ 25 ಬಾವಿಗಳಿವೆ. ಈ ಭಾಗದಲ್ಲಿ ಅಂತರ್ಜಲ ವೃದ್ಧಿಯಾಗಿದೆ. ಈ ಕಾಮಗಾರಿಗೆ ರೂ.38139 ಲಕ್ಷ ಕೂಲಿ ಹಣ ಹಾಗೂ ಸಾಮಗ್ರಿ ವೆಚ್ಚವಾಗಿ 108356 ಸೇರಿ ಒಟ್ಟು 497495 ವೆಚ್ಚ ಮಾಡಲಾಗಿದೆ.

ಇದಕ್ಕಾಗಿ 105 ಜನ ಕೂಲಿಕಾರರು ಕೆಲಸ ಮಾಡಿ ಒಟ್ಟು 1115 ಮಾನವ ದಿನಗಳನ್ನು ಸೃಜನೆ ಮಾಡಿದ್ದಾರೆ.

ಒಟ್ಟಾರೆಯಾಗಿ ಜಿಲ್ಲೆಯಲ್ಲಿ ನೀರು ಮತ್ತು ಮಣ್ಣು ಸಂರಕ್ಷಣೆ ಕಾಮಗಾರಿಗಳನ್ನು ಪರಿಣಾಮಕಾರಿಯಾಗಿ ಅನು?ಾ?ನ ಮಾಡುವುದರ ಜೊತೆಗೆ ನೀರಿನ ಸಂರಕ್ಷಣೆಗೆ ನರೇಗಾ ಯೋಜನೆ ಸಹಕಾರಿಯಾಗಿದೆ. ಯೋಜನೆಯಡಿ ಈ ವರ್ಷ ಹೂಳೆತ್ತಿದ ಕೆರೆಗಳಲ್ಲಿ ಈಗ ಮಳೆ ನೀರು ಸಂಗ್ರಹವಾಗಿದೆ. ಅಂತರ್ಜಲ ಹೆಚ್ಚಳಕ್ಕೆ ವರ್ಷಧಾರೆಯು ಆರಂಭಿಕ ಹೆಜ್ಜೆ ಇಟ್ಟಿದೆ. ಭೂಮಂಡಲದ ಸಕಲ ಜೀವ-ಸಸ್ಯ ರಾಶಿಗಳಿಗೆ ನೀರೇ ಮೂಲಾಧಾರ. ಅನಾದಿ ಕಾಲದಿಂದ ನಾಗರಿಕತೆಗಳು ಬೆಳೆದಂತೆ ನೀರಿನ ಜೊತೆ ಮಾನವನ ನಿಕಟ ಸಂಬಂಧ ಬೆಳೆಯುತ್ತಲೇ ಬಂದಿದೆ. ಮಳೆ ಆಶ್ರಯದ ಕೃಷಿಗೆ ಮಳೆಯ ವೈಫಲ್ಯತೆ ಕಂಡಾಗ ಕೆರೆ ಕಟ್ಟೆಗಳೆ ಆಶ್ರಯವಾಗಿವೆ ಎಂದು ವಿಜಯಪುರ ಜಿಲ್ಲೆಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಾದ ರಿಷಿ ಆನಂದ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ನೈಜತೆಯಿಂದ ಕೂಡಿದ ನಾಟಕ ಕಲೆ ಅತ್ಯಂತ ಶ್ರೇಷ್ಠ: ನಾಗರಾಳ

**ವಿಜಯಪುರ :** ನಾಟಕಗಳು ಸಮಾಜದ ಪ್ರತಿಬಿಂಬ, ನೈಜತೆಯಿಂದ ಕೂಡಿದ ನಾಟಕ ಕಲೆ ಅತ್ಯಂತ ಶ್ರೇಷ್ಠವಾದದ್ದು. ನಾಟಕಕ್ಕೆ ಸಮಾಜವನ್ನು ತಿದ್ದುವ ಶಕ್ತಿ ಇದೆ ಎಂದು ಕಾಂಗ್ರೆಸ್ ಮುಖಂಡ ಮಾಜಿ ಜಿಲ್ಲಾ ಪಂಚಾಯತಿ ಸದಸ್ಯ, ಕಾಯಕ ಪ್ರಿಯ ಶಿವಾನಂದ ಪಾಟೀಲ ಅಭಿಮಾನಿ ಬಳಗದ ಅಧ್ಯಕ್ಷ ತಾನಾಜಿ ನಾಗರಾಳ ಹೇಳಿದರು.



ವಿಜಯಪುರ ಜಿಲ್ಲೆಯ ನಿಡಗುಂದಿ ತಾಲೂಕಿನ ಮಜರೆಕೊಪ್ಪ ಗ್ರಾಮದಲ್ಲಿ ನಡೆದ ಜಗನ್ಮಾತೆ ಚಿನವಾಲ ಕೊಪ್ಪದ ದಾಳಮ್ಮದೇವಿಯ ಜಾತ್ರಾ ಮಹೋತ್ಸವದ ಅಂಗವಾಗಿ ನಡೆದ ಕರ್ಮದ ಕೂಸಿಗೆ ಧರ್ಮದ ತೊಟ್ಟಿಲು ಎಂಬ ಸುಂದರ ಸಾಮಾಜಿಕ ನಾಟಕ ಪ್ರದರ್ಶನವನ್ನು ಉದ್ಘಾಟಿಸಿ ಮಾತನಾಡಿದರು.

ಸಾಹಿತಿ ಪ್ರೊ, ಎ. ಎಚ್. ಕೊಳಮಲಿ ಮಾತನಾಡಿ, ತಂತ್ರಜ್ಞಾನಿಕ ಹಾಗೂ ವೈಜ್ಞಾನಿಕವಾಗಿ ಮುಂದುವರೆದ ಇಂದಿನ ಆಧುನಿಕ ಯುಗದಲ್ಲಿ ನಾಟಕ ಕಲೆಗಳು ಜೀವಂತವಾಗಿ ಉಳಿದಿದೆ ಎಂದರೆ ಅದಕ್ಕೆ ಗ್ರಾಮೀಣ ಭಾಗದ ಕಲಾವಿದರೇ ಕಾರಣ. ಸನ್ನಿವೇಶಕ್ಕೆ ತಕ್ಕಂತೆ ಅಭಿನಯವನ್ನು ಮಾಡಿ ನಾಟಕ ಕಲೆಗೆ ಜೀವ ತುಂಬುವುದು ಪ್ರತಿಯೊಬ್ಬ ಕಲಾವಿದನ ಆದ್ಯ ಕರ್ತವ್ಯವಾಗಿದೆ. ಹಬ್ಬ-ಹರಿದಿನಗಳನ್ನು ಜಾತ್ರಾ ಮಹೋತ್ಸವಗಳನ್ನು ಆಚರಿಸುವುದರಿಂದ ನಮ್ಮ ಮೂಲ ಸಂಸ್ಕೃತಿ ಉಳಿಯುತ್ತದೆ ಎಂದು ಹೇಳಿದರು.

ಹಿರಿಯರಾದ ಬಸನಗೌಡ ನರಸನಗೌಡ್ರ ಮಾತನಾಡಿ, ಮಜರೇಕೊಪ್ಪ ಎಂಬ ಚಿಕ್ಕ ಗ್ರಾಮ ಕಲಾವಿದರ ತವರೂರಾಗಿದೆ. ಈ ಗ್ರಾಮದ ನಾಟಕ ಇತರ ಗ್ರಾಮದ ನಾಟಕ ಕಲಾವಿದರಿಗೆ ಪ್ರೇರಣೆಯಾಗಿದೆ ಎಂದು ಹೇಳಿದರು.

ಜಿಲ್ಲಾ ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿ, ಜಾತ್ರಾ ಕಮಿಟಿಯ ಮುಖ್ಯಸ್ಥ ಪ್ರಭು ಕೊಳಮಲಿ ಮಾತನಾಡಿ, ನಾಟಕವು ಮನರಂಜನೆಯ ಜೊತೆಗೆ ಒಳ್ಳೆಯ ಜ್ಞಾನ ಹಾಗೂ ಸಂಸ್ಕಾರವನ್ನು ತಿಳಿಸಿಕೊಡುತ್ತದೆ. ನಾಟಕದಲ್ಲಿ ಬರುವ ಕೆಟ್ಟ ವಿಚಾರವನ್ನು ಬಿಟ್ಟು ಒಳ್ಳೆಯ ವಿಚಾರವನ್ನು ಸ್ವೀಕಾರ ಮಾಡಿಕೊಂಡು ಉತ್ತಮ ಗುಣವನ್ನು ಹೊಂದಬೇಕೆಂದು ಹೇಳಿದರು.

ದಾಳಮ್ಮದೇವಿಯ ಆರಾಧಕರಾದ ಶ್ರೀ ಮರಳುಸ್ವಾಮಿ ಕೊಳಮಲಿ, ಶ್ರೀ ಬಸಪ್ಪ ಕಂಬಳಿ, ಮಲ್ಲು ಪವಾರ, ಬಸವರಾಜ ನಿಡಗುಂದಿ, ಯಲ್ಲಪ್ಪ ಗೊಬಗೊಡಿ, ಹನಮಂತ. ದ, ಕೊಳಮಲಿ, ಮಹಾದೇವಪ್ಪ ಕೊಳಮಲಿ, ಶ್ರೀಶೈಲ ಕಂಬಳಿ, ಯಮನೂರಿ ಹಂಡಿ, ಲಕ್ಷ್ಮಣ ಚಲಗೊಂಡ, ಹಣಮಂತ ಮಾಕಾಳಿ ಉಪಸ್ಥಿತರಿದ್ದರು.

ರಾಮಸ್ವಾಮಿ ಕೊಳಮಲಿ ಸ್ವಾಗತಿಸಿದರು, ಪರಸಪ್ಪ ಕೊಳಮಲಿ ನಿರೂಪಿಸಿದರು.

## ಸಂಸ್ಕಾರಯುತ, ಮೌಲ್ಯಯುತ ಶಿಕ್ಷಣಕ್ಕೆ ಆದ್ಯತೆ ನೀಡಿ: ಡಾ. ಬಿ.ಎಂ. ಪಾಟೀಲ ಗುರೂಜಿ

**ವಿಜಯಪುರ :** ಇಂದಿನ ಆಧುನಿಕ ಯುಗದಲ್ಲಿ, ಮಾನವೀಯ ಮೌಲ್ಯಗಳು ನಶಿಸಿ ಹೋಗುತ್ತಿರುವ ಸಂದರ್ಭದಲ್ಲಿ ಮಕ್ಕಳಿಗೆ, ಶಿಕ್ಷಣದ ಜೊತೆಗೆ ಸಂಸ್ಕಾರವನ್ನು ಕೊಟ್ಟರೆ ಅವರ ಸರ್ವತೋಮುಖ ಬೆಳವಣಿಗೆಗೆ ಅನುಕೂಲವಾಗುತ್ತದೆ ಎಂದು ಬೆಂಗಳೂರಿನ ಆರ್ಟ್ ಆಫ್ ಲೀವಿಂಗ್‌ನ ಡಾ. ಬಿ. ಎಂ. ಪಾಟೀಲ ಗುರೂಜಿ ಹೇಳಿದರು.

ಮಂಗಳವಾರ ನಗರದ ಪ್ರತಿಷ್ಠಿತ ಚಿನ್ಮಯಿ ಶಾಲೆಯಲ್ಲಿ ಜರುಗಿದ ಬೇಸಿಗೆ ಶಿಬಿರದ ಮುಕ್ತಾಯ ಹಾಗೂ ಮಕ್ಕಳ ಪ್ರತಿಭೆ ಅನಾವರಣ ಕಾರ್ಯಕ್ರಮದ ದಿವ್ಯ ಸಾನ್ನಿಧ್ಯ ವಹಿಸಿ ಮಾತನಾಡಿದರು.

ಇಂದಿನ ಮಕ್ಕಳು ನಾಳಿನ ನಾಗರಿಕರು, ಅವರಿಗೆ ಬಾಲ್ಯದಿಂದಲೇ ಶಿಕ್ಷಣದ ಜೊತೆಗೆ ಯೋಗ, ಧ್ಯಾನ, ಪ್ರಾಣಾಯಾಮ ಮಾಡಿಸಿ ಅವರ ಮಾನಸಿಕ, ದೈಹಿಕ ಸಾಮರ್ಥ್ಯವನ್ನು ವೃದ್ಧಿಸಬೇಕೆಂದರು.

ಸಹ ವಿಸ್ತರಣಾ ನಿರ್ದೇಶಕ ಡಾ. ರವೀಂದ್ರ ಬೆಳ್ಳಿ ಮಾತನಾಡಿ, ಇಂದಿನ ಮಕ್ಕಳಿಗೆ ಕಲಿಕೆಯ ಜೊತೆಗೆ ಪಠ್ಯಕ್ರಮದಲ್ಲಿ ಕೃಷಿಯ ಬಗ್ಗೆ, ಸಾವಯವ ಕೃಷಿ, ಜನರ ಆರೋಗ್ಯ ಕುರಿತು ಶಿಕ್ಷಣ ನೀಡಬೇಕೆಂದರು.




ಚಿನ್ಮಯಿ ಶಾಲೆಯ ಸಂಸ್ಥಾಪಕಿ ಡಾ. ಪ್ರತಿಭಾ ಪಾಟೀಲ ಮಾತನಾಡಿ, ತಮ್ಮ ಶಾಲೆಯಲ್ಲಿ ಮಕ್ಕಳಿಗೆ ಕ್ರಿಯಾತ್ಮಕ ಚಟುವಟಿಕೆಗಳಲ್ಲಿ ತೊಡಗಿಸಿಕೊಳ್ಳುವಂತೆ ಪ್ರೇರಪಣೆ ನೀಡಲಾಗುತ್ತಿದೆ. ಜೊತೆಗೆ ಪಠ್ಯ ಮತ್ತು ಪಠ್ಯೇತರ, ಕ್ರೀಡೆ, ಕಲಾತ್ಮಕ ಚಟುವಟಿಕೆಗಳಲ್ಲಿ ಭಾಗವಹಿಸಲು ಅನುಕೂಲವಾಗುವಂತೆ ಶಿಕ್ಷಣ ನೀಡಲಾಗುತ್ತಿದೆ ಹಾಗೂ ಸರ್ವರಿಗೂ ಅನುಕೂಲವಾಗುವಂತೆ ಸುಲಭವಾಗಿ ಅರ್ಥವಾಗುವ ಹಾಗೆ ಗುಣಮಟ್ಟದ ಶಿಕ್ಷಣ, ಮಕ್ಕಳಲ್ಲಿ ಸ್ಪರ್ಧಾತ್ಮಕ ಮನೋಭಾವ ಮಾಡಿಸುವುದು, ಗುಂಪು ಚರ್ಚೆ, ಭಾಷಣಕಲೆ ಹಾಗೂ ವಿವಿಧ ಕೌಶಲ್ಯಯುತ ಶಿಕ್ಷಣ ನೀಡಲು ಒತ್ತು ನೀಡಲಾಗುತ್ತಿದೆ ಎಂದರು.

ಚಿನ್ಮಯಿ ಪಾಟೀಲ ಸ್ವಾಗತಿಸಿ, ವಂದಿಸಿದರು. ಕಾರ್ಯಕ್ರಮದಲ್ಲಿ ಅತ್ತಾಲಟ್ಟಿ, ತೊರವಿ ಹಾಗೂ ನಗರದ ವಿದ್ಯಾರ್ಥಿಗಳು, ಪಾಲಕರು, ಶಾಲೆಯ ಶಿಕ್ಷಕ, ಶಿಕ್ಷಕಿಯರು ಭಾಗವಹಿಸಿದ್ದರು.

# ಉತ್ತಮ ಮೌಲ್ಯಗಳ ಬೆಳವಣಿಗೆಗೆ ಎನ್‌ಎಸ್‌ಎಸ್ ವೇದಿಕೆಯಾಗಿದೆ: ಬಸವರಾಜ ಡುಗ್ಗಿ

**ಬಾಗಲಕೋಟೆ :** ಎನ್.ಎಸ್.ಎಸ್ ನಾಯಕತ್ವ ಬೆಳವಣಿಗೆಗೆ ಉತ್ತಮ ವೇದಿಕೆಯಾಗಿದ್ದು,ಉತ್ತಮಮೌಲ್ಯಗಳ ಬೆಳವಣಿಗೆ ಸಹಾಯಕಾರಿಯಾಗಿದೆ ಎಂದು ಕಿರಸೂರಿನ ಗೌರಿಶಂಕರ ಮಠ ಗೌರವ ಕಾರ್ಯದರ್ಶಿಯಾದ ಬಸವರಾಜ ಡುಗ್ಗಿ ಹೇಳಿದರು.

ಅವರು ಬಿವಿಬಿ ಸಂಘದ ಬಸವೇಶ್ವರ ವಿಜ್ಞಾನ ಮಹಾವಿದ್ಯಾಲಯದ ರಾಷ್ಟ್ರೀಯ ಸೇವಾ ಯೋಜನೆ ಘಟಕ 1 ಮತ್ತು 2ಮತ್ತು ಐಕ್ಯೂಎಸಿ ವತಿಯಿಂದ ಕಿರಸೂರು ಗ್ರಾಮದಲ್ಲಿ ಹಮ್ಮಿಕೊಂಡಿದ್ದ ರಾಷ್ಟ್ರೀಯ ಸೇವಾ ಯೋಜನೆ ವಾರ್ಷಿಕ ವಿಶೇಷ ಘಟಕದ ಉದ್ಘಾಟನಾ ಸಮಾರಂಭದಲ್ಲಿ ಭಾಗವಹಿಸಿ ಮಾತನಾಡಿದರು.



ಅಧ್ಯಕ್ಷತೆ ವಹಿಸಿದ್ದ ಪ್ರಾಚಾರ್ಯರಾದ ಎಸ್ ಆರ್ ಸಬರದ ಮಾತನಾಡಿ ಜೀವನದ ಅತ್ಯುತ್ತಮ ಭಾಗವಾಗಿ ಏನ್ ಎಸ್ ಎಸ್ ಕಾರ್ಯ ನಿರ್ವಹಿಸುತ್ತಿದೆ ಅದನ್ನು ತಮ್ಮಜೀವನದಲ್ಲಿಅಳವಡಿಸಿಸದುಪಯೋಗ ಪಡೆದುಕೊಳ್ಳಬೇಕೆಂದು ವಿದ್ಯಾರ್ಥಿಗಳಿಗೆ ತಿಳಿಹೇಳಿದರು.

ಡಾ. ಡಿ. ಎಸ್. ಲಮಾಣಿ, ಐಕ್ಯೂಎಸಿ ಸಂಯೋಜಕರು,ಡಾ. ಶ್ರೀಮತಿ ಎಸ್. ಆರ್. ಕಲಾದಗಿ, ವಿದ್ಯಾರ್ಥಿ ಕಲ್ಯಾಣಾಧಿಕಾರಿ, ಡಾ. ಎ. ಎಮ್. ಸತ್ಯನಾಯಕ್, ರಾಷ್ಟ್ರೀಯ ಸೇವಾ ಯೋಜನೆ ಘಟಕ 1ರ ಕಾರ್ಯಕ್ರಮಾಧಿಕಾರಿಗಳಾದ ಶಿವಾನಂದ ಶಿವನಗುತ್ತಿ, ಘಟಕ-2ರ ಕಾರ್ಯಕ್ರಮಾಧಿಕಾರಿ ಎಸ್. ಕೆ. ಜಹಗೀದಾರ, ಎನ್ ಎನ್ ಎಸ್ ಘಟಕದ ಸದಸ್ಯರು, ಸ್ವಯಂಸೇವಕರು, ಕಾಲೇಜಿನ ವಿವಿಧ ವಿಭಾಗದ ಮುಖ್ಯಸ್ಥರು, ವಿದ್ಯಾರ್ಥಿಗಳು, ಮಹಾವಿದ್ಯಾಲಯದ ಬೋಧಕ ಬೋಧಕೇತರ ಸಿಬ್ಬಂದಿಗಳು ಹಾಜರಿದ್ದರು. ಸ್ವಯಂಸೇವಕರಾದ ಬಸವರಾಜ್ ಹಳ್ಳಿಕೇರಿ ನಿರೂಪಿಸಿ, ಶಿವಾನಂದ ಮಡಿವಾಳರ ಪ್ರಾರ್ಥಿಸಿದರು ಮತ್ತುಘಟಕ 1ರ ಕಾರ್ಯಕ್ರಮಾಧಿಕಾರಿಗಳಾದ ಶಿವಾನಂದ ಶಿವನಗುತ್ತಿ ಸ್ವಾಗತಿಸಿ, ಪರಿಚಯಿಸಿದರು. ಕು. ಶಿವಾನಂದ ಮಡಿವಾಳರ ವಂದಿಸಿದರು.

## ಲಕ್ಷಾಂತರ ಭಕ್ತರ ಸಮ್ಮುಖದಲ್ಲಿ ಅದ್ದೂರಿಯಾಗಿ ನಡೆದ ಊರಮ್ಮನ ಜಾತ್ರೆ

**ಕೂಡ್ಲಿಗಿ :** ಪಟ್ಟಣದ ಗ್ರಾಮ ದೇವತೆ ಶ್ರೀ ಊರಮ್ಮ ದೇವಿ ರಥೋತ್ಸವ ಗುರುವಾರ ಸಂಜೆ ಲಕ್ಷಾಂತರ ಭಕ್ತರ ಸಮ್ಮುಖದಲ್ಲಿ ಅದ್ದೂರಿಯಾಗಿ ಜರುಗಿತು. ಕಳೆದ ಮಂಗಳವಾರದಿಂದ ಆರಂಭಗೊಂಡ ರಥೋತ್ಸವದ ಧಾರ್ಮಿಕ ಕಾರ್ಯಕ್ರಮಗಳು, ನಂತರ ಗುರುವಾರ ಬೆಳಿಗ್ಗೆ ಪಟ್ಟಣದ ಭಕ್ತರು ದೇವಿ ದರ್ಶನ ಪಡೆದು ಹೂ,ಹಣ್ಣು, ಕಾಯಿ, ಸೀರೆ ಉಡಿ ಅಕ್ಕಿ ಹಾಕಿ ಭಕ್ತಿ ಮೆರೆದರು. ಕಳೆದ 15 ವರ್ಷಗಳ ನಂತರ ನಡೆದ ಜಾತ್ರೆಗೆ ಪಟ್ಟಣದ ಪ್ರತಿ ಮನೆಗಳಲ್ಲಿಯೂ ರಕ್ತ ಸಂಭಂದಿಗಳು ಹಾಗೂ ಆಪ್ತರನ್ನು ಆಹ್ವಾನಿಸಿದ್ದರು. ಊರಮ್ಮ ದೇವಿ ಜಾತ್ರೆ ಅಂಗವಾಗಿ ಪ್ರತಿಯೊಬ್ಬರೂ ತಮ್ಮ ಮನೆಗಳಲ್ಲಿನ ಸಹೋದರಿರನ್ನು ಜಾತ್ರೆಗೆ ಬರಮಾಡಿಕೊಂಡು ಅವರಿಗೆ ಸೀರೆ ಉಡಿಅಕ್ಕಿ ಹಾಕಿ ಸಂಭ್ರಮಿಸಿದರು. ಇನ್ನು ಗುರುವಾರ ರಥೋತ್ಸವದ ಅಂಗವಾಗಿ ಧಾರ್ಮಿಕ ಕಟ್ಟುಪಾಡುಗಳನ್ನು ನೆರವೇರಿಸಿ, ಸಂಜೆ 5 ಗಂಟೆಗೆ ಊರಮ್ಮ ದೇವಿಯ ಮೂರ್ತಿಯನ್ನು ಭಕ್ತರು ಮೆರವಣಿಗೆಯ ಮೂಲಕ ತಂದು, ರಥೋತ್ಸವ ಮೇಲೆ ಪ್ರತಿಷ್ಠಾಪಿಸಿದರು. ನಂತರ ಕೂಡ್ಲಿಗಿ ಜೋಯಿಸ್ ವೇಣುಗೋಪಾಲ ಆಚಾರ್ ಅವರು ಮಹಾಮಂಗಳರಾತಿ ಮಾಡಿ ರಥೋತ್ಸವಕ್ಕೆ ಚಾಲನೆ ನೀಡಿದರು. ರಾಜ್ಯದ ವಿವಿಧೆಡೆ ಬಂದ ಕಲಾ ತಂಡಗಳು ಮೆರವಣಿಗೆ ಮೂಲಕ ಶ್ರೀ ಊರಮ್ಮ ದೇವಿಗೆ ಜೈ ಎಂದು ಲಕ್ಷಾಂತರ ಭಕ್ತರು ಬಾಳೆ ಹಣ್ಣು ರಥೋತ್ಸವಕ್ಕೆ ಎಸೆದು ಭಕ್ತಿ ಸಮರ್ಪಿಸಿದರು.



ರಥವು ಮದಕರಿ ವೃತ್ತ, ಪಾದಗಟ್ಟೆ ವೃತ್ತ ಹಾಗೂ ಅಂಬೇಡ್ಕರ್ ವೃತದ ಮೂಲಕ ಪ್ರವಾಸಿ ಮಂದಿರದ ಬಳಿಯ ಊರಮ್ಮನ ಪಾದಗಟ್ಟೆಗೆ ರಥವನ್ನು ಎಳೆದು ತಂದ ಭಕ್ತರು ಶ್ರೀ ಊರಮ್ಮ ದೇವಿಗೆ ಮಹಾ ಮಂಗಳರಾತಿ ಮಾಡಿ ರಥೋತ್ಸವ ಸಂಪನ್ನಗೊಳಿಸಿದರು. ಲಕ್ಷಾಂತರ ಭಕ್ತರು ನೆರದಿದ್ದರೂ ಡಿವೈಎಸ್ಪಿ ಮಲ್ಲೇಶ್ ದೊಡ್ಡಮನಿ ನೇತೃತ್ವದಲ್ಲಿ ಸಿಪಿಐ ಪ್ರಲ್ಹಾದ್ ಆರ್ ಚನ್ನಗಿರಿ ಹಾಗೂ ಪಿಎಸ್‌ಐ ಸಿ.ಪ್ರಕಾಶ್ ಸೂಕ್ತ ಪೋಲಿಸ್ ಬಂದೋಬಸ್ತ್ ವ್ಯವಸ್ಥೆ ಮಾಡಿದ್ದರು.

# ಮದುವೆ ಎನ್ನುವದು ಸಂಸ್ಕಾರಗಳನ್ನೊಳಗೊಂಡಿದೆ: ಸ್ವಾಮಿಜಿ

**ತಾಳಿಕೋಟೆ :** ವಿವಾಹ ಎನ್ನುವದು ಮಧುವೆಗಾಗಿ ಅನ್ನುವಂತಹ ಇದೊಂದು ಶಬ್ದವಾಗಿದ್ದು ಈ ಶಬ್ದವನ್ನು ವೈಧಿಕ ಸಂಸ್ಕಾರಗಳ ಪ್ರಕಾರ ಮಧುವೆಯನ್ನು ವಿವಿರಿಸಲು ಬಳೆಸಲಾಗುತ್ತದೆ ಹಿಂದೂ ಸಾಂಪ್ರದಾಯಗಳ ಪ್ರಕಾರ ಮಧುವೆಯನ್ನು ಸಂಸ್ಕಾರಗಳ ಪೈಕಿ ಒಂದೆಂದು ಹೇಳಲಾಗುತ್ತಿದ್ದು ಇದೊಂದು ಹೆಂಡತಿ ಮತ್ತು ಗಂಡನ ಜೀವನ ಬದ್ದತೆಯಾಗಿದೆ ಎಂದು ನರಗುಂದ ತಾಲೂಕಿನ ಬೇರನಟ್ಟಿ ಹಾಗೂ ಶಿರೋಳ ಮಠದ ಶ್ರೀ ಶಾಂತಲಿಂಗೇಶ್ವರ ಮಹಾಸ್ವಾಮಿಗಳು ನುಡಿದರು. ಸೋಮವಾರರಂದು ಸ್ಥಳೀಯ ಶ್ರೀ ಖಾಸ್ಗತೇಶ್ವರ ಸಭಾಭವನದಲ್ಲಿ ಏರ್ಪಡಿಸಲಾದ ಬಬಲೇಶ್ವರ ಮನೆತನದ ಪವನಕುಮಾರ ಹಾಗೂ ಸೀತಲ ಎಂಬ ಈ ನೂತನ ವಧು-ವರರ ವಿವಾಹ ಮಹೋತ್ಸವದಲ್ಲಿ ಪಾಲ್ಗೊಂಡು ಅಕ್ಷತಾರೋಪಣ ಕಾರ್ಯಕ್ರಮ ನೆರವೇರಿಸಿ ಸನ್ಮಾನಿಸಿ ಗೌರವಿಸಿ ಮಾತನಾಡುತ್ತಿದ್ದ ಶ್ರೀಗಳು ಹಿಂದು ಧರ್ಮದಲ್ಲಿ ನಡೆಯುವ ಮಧುವೆಗಳು ಅದರದ್ದೇ ಆದಂತಹ ಆಚಾರ ವಿಚಾರಗಳ ಸಂಪ್ರದಾಯಗಳನ್ನು ಒಳಗೊಂಡಿವೆ ವಧು-ವರರ ಜೀವನವೇ ಒಂದು ಭಾಗವೆಂದು ಪರಿಗಣಿಸಲಾಗುತ್ತಿದ್ದು ನೂತನವಾಗಿ ದಾಂಪತ್ಯ ಜೀವನಕ್ಕೆ ಕಾಲಿಟ್ಟಿರುವ ಈ ಜೋಡಿಗಳು ತಮ್ಮ ಗ್ರಹಸ್ಥಾಶ್ರಮವೆಂಬ ಜೀವನದಲ್ಲಿ ಹೆಸರು ಗಳಿಸಿ ಮುನ್ನುಗ್ಗಲಿ ಎಂದರು.



ಗ್ರಹಸ್ಥಾಶ್ರಮ ಎಂಬುದರಲ್ಲಿ ಕಾಯಕ, ದಾಸೋಹ ಎಂಬುದನ್ನು ಎಂದೂ ಮರೆಯದಿರಿಇದು12ನೇಶತಮಾನದಲ್ಲಿಯೇ ಸಾಮಾಜಿಕ, ಅಸಮಾನತೆ ತಾಂಡವ ಆಡುತ್ತಿರುವದನ್ನು ಹಾಗೂ ಕಂದಾಚಾರವನ್ನು ಕಿತ್ತೊಗೆಯುವಲ್ಲಿ ಬಸವಣ್ಣನವರು ಸೇರಿದಂತೆ ಶರಣರು ಮಾಡಿದಂತಹ ಅಂದಿನ ಕ್ರಾಂತಿ ಬಹಳೇ ಅದ್ಬುತ್ ಆಗಿತ್ತೆಂದರು. ಅಂತಹದನ್ನುಪ್ರತಿಯೊಬ್ಬರುತಾವುದುಡಿದು ಇತರರಿಗೂ ನೀಡಬೇಕು ಎಂಬುದನ್ನು ಈ ಹಿಂದಿನಿಂದ ಬಂದ ಆಸೆ ಇದಾಗಿದ್ದು ದಾಸೋಹ ಮತ್ತು ಕಾಯಕ ಈ ಪರಿಕಲ್ಪನೆ ಕುರಿತು ಈ ಹಿಂದೆ ಜಾಗೃತಿ ಮೂಡಿಸುತ್ತಾ ಸಾಗಿಬಂದಂತೆ ಮುನ್ನಡೆಸಿಕೊಂಡು ಸಾಗಬೇಕೆಂದು ಶ್ರೀಗಳು ಆಶಿಸಿದರು.

ಗ್ರಹಸ್ಥವೆಂಬುದು ಸಾಮಾಜಿಕ ಸಂದರ್ಬದಲ್ಲಿ ಎಲ್ಲ ಹಂತಗಳಲ್ಲಿಯೂ ಮುಖ್ಯವೆಂದು ಪರಿಗಣಿಸಲಾಗುತ್ತದೆ ಇದು ವೈಯಸ್ಸಿನ ಆದಾರಿತ ಎರಡು ಹಂತವನ್ನು ಸೂಚಿಸುತ್ತದೆ ಮನೆಯನ್ನು ನಿರ್ವಹಿಸುವದು ಕುಟುಂಬ ಬೆಳೆಸುವದು ಶಿಕ್ಷಣಕ್ಕೆ ಒತ್ತು ನೀಡುವದುಕುಟುಂಬದ ಕ್ರೇಂದಿಕೃತ ಮತ್ತು ಸಾಮಾಜಿಕ ಜೀವನ ನಡೆಸುವ ಕರ್ತವ್ಯಗಳೊಂದಿಗೆ ವೈವಾಹಿಕ ಜೀವನವನ್ನು ಸಾಕಾರಗೊಳಿಸುತ್ತದೆ ಎಂದು ಹೇಳಿದ ಶ್ರೀಗಳು ಇಂದು ನೂತನವಾಗಿ ದಾಂಪತ್ಯಜೀವನಕ್ಕೆಕಾಲಿರಿಸಿದ ಬಬಲೇಶ್ವರ ಮನೆತನದ ಕುಟುಂಭದವರು ತಮ್ಮ ಹಿರಿಯರ ಮಾರ್ಗದರ್ಶನದಂತೆ ತಾವೂ ಕೂಡಾತಮ್ಮಜೀವನಉದ್ದಕ್ಕೂಹೆಸರುಗಳಿಸಿ ಎಲ್ಲರೊಂದಿಗೆ ಮೇಚ್ಚುಗೆಗೆ ಪಾತ್ರರಾಗಿರಿ ಎಂದು ಶ್ರೀಗಳು ಆಶಿರ್ವದಿಸಿದರು.

ಈ ಸಮಯದಲ್ಲಿ ಶ್ರೀ ಖಾಸ್ಗತೇಶ್ವರ ಮಠದ ಉಸ್ತುವಾರಿ ವೇ.ಮುರುಘೇಶ ವಿರಕ್ತಮಠ, ನೀಲಕಂಠ ಬಬಲೇಶ್ವರ, ಶಿವಲಿಂಗಪ್ಪ, ಸಂಗಮೇಶ,

ಶಂಕ್ರೆಪ್ಪ ಕುಬಸದ, ಶ್ರೀಶೈಲ ಬಬಲೇಶ್ವರ, ಸುಭಾಸ ಯಾಳಗಿ, ಮಹಾಂತಪ್ಪ ಬೊಮ್ಮನಳ್ಳಿ, ವಾಸುದೇವ ಹೆಬಸೂರ, ಬಾಬುರಾವ್ ಶಿಂಧೆ, ಬಿ.ಎನ್.ಹಿಪ್ಪರಗಿ, ವ್ಹಿ.ಸಿ.ಹಿರೇಮಠ(ಹಂಪಿಮುತ್ಯಾ), ಚಂದ್ರಶೇಖರ ಬಬಲೇಶ್ವರ, ಚನ್ನಬಸಪ್ಪ ಬಬಲೇಶ್ವರ, ತಿರುಪತಿ ನವಲೆ, ಅಶೋಕ ಶೆಟ್ಟಿ, ನಿಡಗುಂದಿ ಸಾಹುಕಾರ, ಹಾಗೂ ಸಮಾಜ ಬಾಂದವರು ಪಾಲ್ಗೊಂಡು ವಧು-ವರರಿಗೆ ಆಶಿರ್ವದಿಸಿದರು.

## ಸರಕಾರಿ ಶಾಲೆ ಅಂದರೆ ಒಂದುರೀತಿ ಅಸಡ್ಡೆ ಮಾಡುತ್ತಿರುವುದು ವಿಷಾದನೀಯ : ಶಿಕ್ಷಣಾಧಿಕಾರಿ ಶೇಖರಪ್ಪ ಹೊರಪೇಟೆ




**ಹೊಸಪೇಟೆ :** ಸರ್ಕಾರಿ ಶಾಲೆ ಯಲ್ಲಿ ವ್ಯಾಸಂಗ ಮಾಡಿದ ಮಕ್ಕಳು ಅನೇಕ ಕಡೆ ಇಂದು ದೊಡ್ಡ ದೊಡ್ಡ ಹುದ್ದೆಯಲ್ಲಿ ಕಾರ್ಯ ನಿರ್ವಹಿಸುತ್ತಿದ್ದಾರೆ ಖಾಸಗಿ ಶಿಕ್ಷಣ ವ್ಯವಸ್ಥೆಗೆ ಇಂದಿನ ಪೋಷಕರು ಅಂಟಿಕೊಂಡಿರುವುದು ಹಾಗೂ ಸರಕಾರಿ ಶಾಲೆ ಅಂದರೆ ಒಂದುರೀತಿ ಅಸಡ್ಡೆ ಮಾಡುತ್ತಿರುವುದು ವಿಷಾದನೀಯ ಎಂದು ಹೊಸಪೇಟೆ ಕ್ಷೇತ್ರ ಶಿಕ್ಷಣಾಧಿಕಾರಿ ಶೇಖರಪ್ಪ ಹೊರಪೇಟೆ ವಿಷಾದನೀಯ ವ್ಯಕ್ತಪಡಿಸಿದರು.

ಅವರು ಸರಕಾರಿ ಪ್ರೌಢ ಶಾಲೆ ಅನಂತಶಯನ ಗುಡಿಯಲ್ಲಿ ಜರುಗಿದ ನಮ್ಮ ಶಾಲೆ ನಮ್ಮ ಜವಾಬ್ದಾರಿ ಕಾರ್ಯಕ್ರಮ ವನ್ನು ಉದ್ದೇಶಿಸಿ ಮಾತನಾಡಿ ನಿಮ್ಮ ಮಕ್ಕಳಿಗೆ ಕೇವಲ ಶಿಕ್ಷಣವನ್ನಲ್ಲದೇ ಉತ್ತಮ ಸಂಸ್ಕಾರ ವನ್ನು ಕೊಡಿ ಮನೆಯೇ ಮೊದಲ ಪಾಠಶಾಲೆ.

ಉತ್ತಮ ಸಂಸ್ಕಾರ ಕಲಿತ ಮಗು ಮುಂದೆ ಉತ್ತಮ ವ್ಯಕ್ತಿಯಾಗಿ ಸಮಾಜ ಕ್ಕೆ ಮಾದರಿ ಯಾಗುತ್ತಾನೆ. ಮಕ್ಕಳ ಬಗ್ಗೆ ಪೋಷಕರು ನಿಗವಹಿಸುವುದು.

ಅವರ ಜವಾಬ್ದಾರಿ ಯಾಗಿರುತ್ತದೆ ಎಂದು ಹೇಳಿದರು.

ಈ ಸಮಯದಲ್ಲಿ ಶಾಲೆಯ ಮುಖ್ಯಉಪಾಧ್ಯಯರು ಎಲ್ಲಾ ಶಾಲೆಗಳ ಮುಖ್ಯ ಗುರುಗಳು ಖಆಒಅ ಅಧ್ಯಕ್ಷರು ಹಾಗೂ ಶಿಕ್ಷಣ ಇಲಾಖೆ ಅಧಿಕಾರಿಗಳು ಅಖಕ ಅಧಿಕಾರಿಗಳು ಉಪಸ್ಥಿತರಿದ್ದರು.

"SIHI KAHI" Kannada Daily Morning, Editor, Owner, Publisher, Printer by **MARUTI BASAVANTAPPA HOASAMANI** Published from Chittaragi Cross, S.C. Colony, Ward No. 9, Amingada-587112, Tq. Hungund Dist : Bagalkot, Karnataka and Printed at **SUDIN PRINTERS**, Sector No. 33, Shop No. 38 & 40, Opp. Ambedkar Bhavan, **NAVANAGAR, BAGALKOT-587 101.** Dist : Bagalkot, Karnataka State

Designed by MKG-9535762618